ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 35 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಗುರುವಾರ ದಿನಾಂಕ : 13-08-2026 ಪುಟ : 04 ಬೆಲೆ : 2-00

# ಕಾವೇರಿ ಕಿಚ್ಚು: ಇಂದು ಕರ್ನಾಟಕ ಬಂದ್!

ಬೆಂಗಳೂರು: ಕಾವೇರಿ ನದಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ಕರ್ನಾಟಕಕ್ಕೆ ಮತ್ತೆ ತೀವ್ರ ಹಿನ್ನಡೆಯಾಗಿದ್ದು, ನೆರೆ ರಾಜ್ಯ ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ಪ್ರತಿದಿನ 12,000 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ಮಂಗಳವಾರ ಕರ್ನಾಟಕ ಸರ್ಕಾರಕ್ಕೆ ಸೂಚಿಸಿದೆ.

ಕಾವೇರಿ ನೀರು ನಿಯಂತ್ರಣ ಸಮಿತಿ ತಮಿಳುನಾಡಿಗೆ ನೀರು ಬಿಡುವಂತೆ ನೀಡಿದ ಆದೇಶದ ವಿರುದ್ಧ ಕನ್ನಡಪರ ಸಂಘಟನೆಗಳು ಗುರುವಾರ ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಕರ್ನಾಟಕ ಬಂದ್ ಗೆ ಕರೆ ನೀಡಿವೆ.

ಬರದ ಮಧ್ಯೆ ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಆದೇಶ ನೀಡಿರುವುದು ರಾಜ್ಯದ ಜನತೆಯ ಆಕ್ರೋಶಕ್ಕೆ ಕಾರಣವಾಗಿದೆ. ತಮಿಳುನಾಡಿಗೆ ಕಾವೇರಿ ನೀರು ಹರಿಸುವುದನ್ನು ಖಂಡಿಸಿ ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ಅವರು ನಾಳೆ 'ಕರ್ನಾಟಕ ಬಂದ್'ಗೆ ಕರೆ ನೀಡಿದ್ದಾರೆ. ಆದರೆ, ಈ ಬಂದ್‌ಗೆ ರೈತ ಸಂಘಟನೆಗಳು ಬಿಟ್ಟರೆ ಬೇರೆ ಯಾವುದೇ ಸಂಘಟನೆಗಳು ಬೆಂಬಲಿಸಿಲ್ಲ.

ಆರಂಭದಲ್ಲೇ ಬಂದ್‌ಗೆ ಬೆಂಬಲ ನೀಡುವುದಾಗಿ ಹಲವು ಸಂಘಟನೆಗಳು ಭರವಸೆ ನೀಡಿದ್ದವು. ಆದರೆ ಇದೇ ಸಮಯಕ್ಕೆ ಸ್ವಲ್ಪ ಮಳೆಯಾಗಿದ್ದರಿಂದ ಜಲಾಶಯದಲ್ಲಿ ನೀರಿನ ಪ್ರಮಾಣ ಹೆಚ್ಚಳವಾಗಿದೆ. ಇನ್ನು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಸಹ ರೈತರ ಪರ ನಿರ್ಧಾರ ಕೈಗೊಳ್ಳುವುದಾಗಿ ಸ್ಪಷ್ಟಪಡಿಸಿದ್ದಾರೆ. ಹೀಗಾಗಿ ಕೆಲ ಸಂಘಟನೆಗಳು ಬಂದ್‌ಗೆ ನೀಡಿದ್ದ ಬೆಂಬಲವನ್ನು ವಾಪಸ್ ಪಡೆದುಕೊಂಡಿವೆ. ಈ ಹಿನ್ನೆಲೆಯಲ್ಲಿ ನಾಳಿನ ಬಂದ್ ಗೆ ಈಗಲೇ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ರಾಜ್ಯಾದ್ಯಂತ ಜನಜೀವನ ಎಂದಿನಂತೆ ಯಥಾಸ್ಥಿತಿ ಇರುವ ಸಾಧ್ಯತೆ ಇದೆ.

2ನೇ ಪುಟಕ್ಕೆ...




## ಸರ್ಕಾರದಿಂದ ಮಹತ್ವದ ಆದೇಶ: ಕರ್ನಾಟಕದಲ್ಲಿ ಗುಟ್ಕಾ, ತಂಬಾಕು ಪಾನ್ ಮಸಾಲಾ ಬ್ಯಾನ್

ಬೆಂಗಳೂರು: ಆಹಾರ ಸುರಕ್ಷತೆ ಮತ್ತು ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ಕರ್ನಾಟಕ ಸರ್ಕಾರ ಬುಧವಾರ ಮಹತ್ವದ ಆದೇಶ ಹೊರಡಿಸಿದ್ದು, ಪಾನ್ ಮಸಾಲಾ ಉತ್ಪನ್ನಗಳ ಮೇಲೆ ಒಂದು ವರ್ಷದ ನಿಷೇಧ ಹೇರಿದೆ.

ರಾಜ್ಯಾದ್ಯಂತ ಗುಟ್ಕಾ ಹಾಗೂ ತಂಬಾಕು ಅಥವಾ ನಿಕೋಟಿನ್ ಒಳಗೊಂಡ ಪಾನ್ ಮಸಾಲಾ ಉತ್ಪನ್ನಗಳ ಮೇಲೆ ಒಂದು ವರ್ಷದ ನಿಷೇಧ ಹೇರಲಾಗಿದ್ದು, ಗುಟ್ಕಾ ಹಾಗೂ ತಂಬಾಕು ಅಥವಾ ನಿಕೋಟಿನ್ ಒಳಗೊಂಡ ಪಾನ್ ಮಸಾಲಾ ಉತ್ಪನ್ನಗಳ ತಯಾರಿಕೆ, ದಾಸ್ತಾನು, ವಿತರಣೆ, ಸಾಗಣೆ ಮತ್ತು ಮಾರಾಟವನ್ನು ಆಹಾರ ಸುರಕ್ಷತಾ ಆಯುಕ್ತರು ನಿಷೇಧಿಸಿದ್ದಾರೆ.

ಇದಲ್ಲದೆ, ಪಾನ್ ಮಸಾಲಾದೊಂದಿಗೆ ಮಿಶ್ರಣ ಮಾಡಲು ಅನುಕೂಲವಾಗುವಂತೆ ಪ್ರತ್ಯೇಕವಾಗಿ ಪ್ಯಾಕ್ ಮಾಡಿ ಮಾರಾಟ ಮಾಡುವ ತಂಬಾಕು ಉತ್ಪನ್ನಗಳಿಗೂ ಈ ನಿಷೇಧ ಅನ್ವಯವಾಗಲಿದೆ.

ಈ ಕ್ರಮದಿಂದ ರಾಜ್ಯಾದ್ಯಂತ ಇಂತಹ ಉತ್ಪನ್ನಗಳ ತಯಾರಿಕೆ ಮತ್ತು ಮಾರಾಟಕ್ಕೆ ಒಂದು ವರ್ಷದ ಮಟ್ಟಿಗೆ ಸಂಪೂರ್ಣ ತಡೆ ಬೀಳಲಿದೆ. ಆದೇಶ ಉಲ್ಲಂಘಿಸುವ ತಯಾರಕರು, ವಿತರಕರು, ಚಿಲ್ಲರೆ ವ್ಯಾಪಾರಿಗಳು ಸೇರಿದಂತೆ ಸಂಬಂಧಪಟ್ಟವರ ವಿರುದ್ಧ ತಪಾಸಣೆ ನಡೆಸಿ ಕ್ರಮ ಕೈಗೊಳ್ಳಲು ಅಧಿಕಾರಿಗಳು ಮುಂದಾಗುವ

2ನೇ ಪುಟಕ್ಕೆ...




# ನೂತನ ಸಚಿವರಿಗೆ ಖಾತೆ ಭಾಗ್ಯ

ಬೆಂಗಳೂರು : ಹಾಲಿ ಸಚಿವರ ಪೈಕಿ ಕೆಲವರ ಖಾತೆಗಳನ್ನು ಅದಲು-ಬದಲು ಮಾಡಿ ರುವ ಕಾಂಗ್ರೆಸ್ ಹೈಕಮಾಂಡ್ ಹಿರಿಯ ಸಚಿವ ಕೆ.ಎಚ್.ಮುನಿಯಪ್ಪ ಅವರಿಗೆ ಸಮಾಜ ಕಲ್ಯಾಣ ಜವಾಬ್ದಾರಿ ವಹಿಸಿದೆ. ಹಿರಿಯ ಸಚಿವ ಯು.ಟಿ.ಖಾದರ್ ಅವರ ಖಾತೆಯನ್ನೂ ಬದಲಾವಣೆ ಮಾಡಿದೆ. ಹಿಂದೆ ಸಿದ್ದರಾಮಯ್ಯಅವರ ಸರ್ಕಾರದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜವಾಬ್ದಾರಿ ನಿರ್ವಹಿಸಿದ್ದ ಮಧುಬಂಗಾರಪ್ಪ ಅವರಿಗೆ ಅದೇ ಜವಾಬ್ದಾರಿ ನೀಡಲಾಗಿದೆ. ಚೆಲುವರಾಯ ಸ್ವಾಮಿ ಅವರಿಗೆ-ಕೃಷಿ, ಸಂತೋಷ್‌ಲಾಡ್ ಅವರಿಗೆ-ಕಾರ್ಮಿಕ, ಜಮೀರ್ ಅಹಮದ್ ಖಾನ್ ಅವರಿಗೆ-ವಸತಿ, ಎಸ್.ಎಸ್.ಮಲ್ಲಿಕಾರ್ಜುನ ಅವರಿಗೆ-ಗಣಿ, ಭೂ ವಿಜ್ಞಾನ ಜವಾಬ್ದಾರಿಗಳನ್ನು ಮುಂದುವರಿಸಲಾಗಿದೆ.

ಕೆ.ಎಚ್.ಮುನಿಯಪ್ಪ ಅವರ ಬಳಿಯಿದ್ದ ಆಹಾರ ಮತ್ತು ನಾಗರಿಕ ಪೂರೈಕೆಯನ್ನು ರಿಜ್ವಾನ್ ಅರ್ಷದ್‌ಗೆ ನೀಡಲಾಗಿದೆ. ರಾಮಲಿಂಗಾ ರೆಡ್ಡಿಯವರನ್ನು ಜಲ ಸಂಪನೂಲ ಖಾತೆಯಲ್ಲೆ ಮುಂದುವರಿಸಲಾಗಿದೆ. ಆರ್ಥಿಕ ಇಲಾಖೆಯ ಮೇಲೆ ಕಣ್ಣಿಟ್ಟಿದ್ದ ಬಸವರಾಜ ರಾಯರೆಡ್ಡಿ ಅವರಿಗೆ ಉನ್ನತ ಶಿಕ್ಷಣ ಜವಾಬ್ದಾರಿ

2ನೇ ಪುಟಕ್ಕೆ...



## ಅದಾನಿ ವಿರುದ್ಧದ ಕೇಸ್ ಕೈಬಿಟ್ಟ ಕೋರ್ಟ್: ಮೋದಿ ವಿರುದ್ಧ ರಾಹುಲ್ ವಾಗ್ದಾಳಿ



ನವದೆಹಲಿ: ಉದ್ಯಮಿ ಗೌತಮ್ ಅದಾನಿ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣವನ್ನು ಅಮೆರಿಕ ನ್ಯಾಯಾಲಯವು ವಜಾಗೊಳಿಸಿರುವ ಸಂಬಂಧ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಪ್ರತಿಕ್ರಿಯಿಸಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ರಾಹುಲ್ ಗಾಂಧಿ, 'ಈ ವಿಚಾರದಲ್ಲಿ ಕಣ್ಣಿಗೆ ಕಾಣುವುದಕ್ಕಿಂತಲೂ ಹೆಚ್ಚಿನ ಸಂಗತಿಗಳಿವೆ. ಅಸಹಾಯಕ

2ನೇ ಪುಟಕ್ಕೆ...

## ರಾಜ್ಯ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಎಚ್‌ಡಿಕೆ ವಾಗ್ದಾಳಿ


ನವದೆಹಲಿ : ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ಎದುರಾಗುವ ಸಂಕಷ್ಟವನ್ನು ಪರಿಹರಿಸಿಕೊಳ್ಳಲು ರಾಜ್ಯಸರ್ಕಾರ ಏಕೆ ಸಂಕಷ್ಟ ಸೂತ್ರಕ್ಕೆ ಒತ್ತಡ ಹಾಕಿಲ್ಲ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಶ್ನಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಡಬ್ಲ್ಯೂಆರ್‌ಸಿ ಮತ್ತು ಸಿಡಬ್ಲ್ಯೂಎಂಎ ಮತ್ತೆ ತಮಿಳುನಾಡಿಗೆ

2ನೇ ಪುಟಕ್ಕೆ...



# ನೀಟ್ ಪ್ರಕರಣ : ಚರ್ಚೆಗೆ ಸಿದ್ಧ

## 20 ದಿನಗಳ ಬಳಿಕ ಮೌನ ಮುರಿದ ಅಮಿತ್ ಶಾ



ನವದೆಹಲಿ: ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ವಿರುದ್ಧ ದೆಹಲಿಯಲ್ಲಿ ನಡೆದ ಪ್ರತಿಭಟನೆ ವೇಳೆ, ವಿದ್ಯಾರ್ಥಿಗಳ ಮೇಲೆ ಪೊಲೀಸರ ಕಠಿಣ ಕ್ರಮದ ಬಗ್ಗೆ ಸ್ಪಷ್ಟನೆ ನೀಡಬೇಕೆಂಬ ವಿಪಕ್ಷಗಳ ಒತ್ತಾಯಕ್ಕೆ ಉತ್ತರ ನೀಡಲು ಸಿದ್ಧವಿರುವುದಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ವಿದ್ಯಾರ್ಥಿ ಪ್ರತಿಭಟನೆ ನಡೆದ 20 ದಿನಗಳ ಬಳಿಕ ಸಂಸತ್ತಿನ ಆವರಣದಲ್ಲಿ ಪ್ರತ್ಯಕ್ಷರಾದ ಅವರು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ದೆಹಲಿಯ ಜಂತರ್ ಮಂತರ್ ಪ್ರತಿಭಟನೆ ವೇಳೆ ವಿದ್ಯಾರ್ಥಿಗಳ ಮೇಲೆ ಪೊಲೀಸರ ಕ್ರಮದ ಕುರಿತು ಪ್ರತಿಕ್ರಿಯೆ ನೀಡಿದ್ದಾರೆ.

ಸಂಸತ್ ಕಲಾಪದಲ್ಲಿ ನಿರಂತರ ಗದ್ದಲ ಮತ್ತು ಮುಂದೂಡಿಕೆಯ ನಡುವೆಯೇ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಪತ್ರ ಬರೆದು, ನೀಟ್ ಪರೀಕ್ಷೆಯಲ್ಲಿನ ಅಕ್ರಮಗಳ ಆರೋಪ ಕುರಿತು ಸದನದಲ್ಲಿ ಚರ್ಚೆಗೆ ಅವಕಾಶ ಕಲ್ಪಿಸುವಂತೆ ಮನವಿ ಮಾಡಿದ್ದಾರೆ. ಈ ವಿಚಾರದಲ್ಲಿ ಸರ್ಕಾರ ಚರ್ಚೆಗೆ ಸಂಪೂರ್ಣ ಸಿದ್ಧವಿದ್ದು, ಪ್ರತಿಪಕ್ಷದ ನಾಯಕರೊಂದಿಗೆ ಸಮಾಲೋಚಿಸಿ ಚರ್ಚೆಗೆ ಸೂಕ್ತ ವ್ಯವಸ್ಥೆ ಮಾಡುವಂತೆ ಅವರು ಸ್ಪೀಕರ್‌ಗೆ ಮನವಿ ಮಾಡಿದ್ದಾರೆ.

ಲೋಕಸಭೆಯ ವ್ಯವಹಾರ ಸಲಹಾ ಸಮಿತಿ ಸಭೆಯಲ್ಲಿ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ನೀಟ್ ವಿಚಾರದಲ್ಲಿ ಸರ್ಕಾರ ಮತ್ತು ಪ್ರತಿಪಕ್ಷದ


2ನೇ ಪುಟಕ್ಕೆ...

## ಮಲ್ಲಿಕಾರ್ಜುನ ಖರ್ಗೆ ಭಾಷಣದ ನಂತರ ವೇದಿಕೆ 'ಶುದ್ಧೀಕರಣ': ಭುಗಿಲೆದ್ದ ಜಾತಿ ತಾರತಮ್ಯ ವಿವಾದ!



ಉತ್ತರಾಖಂಡ : ಹಲ್ವಾನಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಸಾರ್ವಜನಿಕ ಸಭೆಯ ನಂತರ ವೇದಿಕೆಯನ್ನು "ಶುದ್ಧೀಕರಿಸುವುದು" ದೊಡ್ಡ ರಾಜಕೀಯ ವಿವಾದವನ್ನು ಹುಟ್ಟುಹಾಕಿದೆ. ಖರ್ಗೆ ಜನರನ್ನು ಉದ್ದೇಶಿಸಿ ಮಾತನಾಡಿದ ವೇದಿಕೆಯನ್ನು ಕೆಲವು ವ್ಯಕ್ತಿಗಳು ನಂತರ "ಶುದ್ಧೀಕರಿಸಿದರು" ಎಂದು ಕಾಂಗ್ರೆಸ್ ಆರೋಪಿಸಿದೆ. ಇದನ್ನು ಬಿಜೆಪಿಗೆ ಸಂಬಂಧಿಸಿದ ಜನರು ಮಾಡಿದ್ದು ಇದು ದಲಿತ ಸಮುದಾಯಕ್ಕೆ ಮಾಡಿದ ಅವಮಾನ ಎಂದು ಕಾಂಗ್ರೆಸ್ ಹೇಳಿಕೊಂಡಿದೆ. ಏತನ್ಮಧ್ಯೆ, ಶುದ್ಧೀಕರಣ ಮಾಡಿದವರ ಯಾವುದೇ ಸಂಪರ್ಕವನ್ನು ಬಿಜೆಪಿ ನಿರಾಕರಿಸಿದೆ. ಏತನ್ಮಧ್ಯೆ, ವೇದಿಕೆಯನ್ನು ಶುದ್ಧೀಕರಿಸಿದ ಹಿಂದೂ ಸಂಘಟನೆಯು ಯಾವುದೇ ವ್ಯಕ್ತಿಯನ್ನು ಅವಮಾನಿಸುವುದು ಅಲ್ಲ, ಆದರೆ

2ನೇ ಪುಟಕ್ಕೆ...



ಒಂದನೇ ಪುಟದಿಂದ..

# ಮಲ್ಲಿಕಾರ್ಜುನ ಖರ್ಗೆ ಭಾಷಣದ ನಂತರ ವೇದಿಕೆ 'ಶುದ್ಧೀಕರಣ': ಭುಗಿಲೆದ್ದ ಜಾತಿ ತಾರತಮ್ಯ ವಿವಾದ!

ರಾಮಲೀಲಾ ವೇದಿಕೆಯ "ಪಾವಿತ್ರ್ಯತೆ"ಯನ್ನು ಕಾಪಾಡಿಕೊಳ್ಳುವುದು ತನ್ನ ಉದ್ದೇಶ ಎಂದು ಹೇಳುತ್ತದೆ. ಆಗಸ್ಟ್ 8 ರಂದು, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಲ್ವಾನಿಯ ರಾಮಲೀಲಾ ಮೈದಾನದಲ್ಲಿ ನಡೆದ ದೊಡ್ಡ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. 2027ರ ಉತ್ತರಾಖಂಡ್ ವಿಧಾನಸಭಾ ಚುನಾವಣೆಯ ಸಿದ್ಧತೆಗಳ ಭಾಗವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕೆಲವು ದಿನಗಳ ನಂತರ, ಆಗಸ್ಟ್ 11 ರಂದು, ಶ್ರೀ ರಾಮ ಸೇನಾ ಚಾರಿಟೇಬಲ್ ಸರ್ವಿಸ್ ಟ್ರಸ್ಟ್ ಎಂಬ ಸಂಘಟನೆಯು ಅದೇ ವೇದಿಕೆಯಲ್ಲಿ ವೇದ ಮಂತ್ರಗಳನ್ನು ಪಠಿಸುತ್ತಾ ಮತ್ತು ಯಜ್ಞವನ್ನು ನಡೆಸುತ್ತಾ "ಶುದ್ಧೀಕರಣ" ಸಮಾರಂಭವನ್ನು ಆಯೋಜಿಸಿತ್ತು ಎಂದು ಆರೋಪಿಸಲಾಗಿದೆ. ರಾಮಲೀಲಾ ಮೈದಾನವು ಧಾರ್ಮಿಕ ಮತ್ತು ಸಾಂಸ್ಕೃತಿಕ ತಾಣವಾಗಿದೆ ಎಂದು ಸಂಘಟನೆಯ ಸದಸ್ಯರು ಹೇಳಿದ್ದಾರೆ. ರಾಜಕೀಯ ಕಾರ್ಯಕ್ರಮದ ಸಮಯದಲ್ಲಿ ವೇದಿಕೆಯ ಘನತೆಗೆ ಸೂಕ್ತವಲ್ಲದ ಘೋಷಣೆಗಳನ್ನು ಎತ್ತಲಾಗಿದೆ ಎಂದು ಅವರು ಆರೋಪಿಸಿದರು. ಆದ್ದರಿಂದ, ವೇದಿಕೆಯನ್ನು ಶುದ್ಧೀಕರಿಸಲಾಯಿತು.

ಈ ಘಟನೆಯ ನಂತರ, ಕಾಂಗ್ರೆಸ್ ಬಿಜೆಪಿಯ ಮೇಲೆ ತೀವ್ರ ದಾಳಿ ನಡೆಸಿತು. ಮಲ್ಲಿಕಾರ್ಜುನ ಖರ್ಗೆ ದಲಿತ ಸಮುದಾಯದಿಂದ ಬಂದವರು ಮತ್ತು ಅವರ ಭಾಷಣದ ನಂತರ ವೇದಿಕೆಯನ್ನು ಶುದ್ಧೀಕರಿಸುವುದು ಸಾಮಾಜಿಕ ತಾರತಮ್ಯ ಮತ್ತು ಸಂಕುಚಿತ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಕಾಂಗ್ರೆಸ್ ಹೇಳಿದೆ. ಬಿಜೆಪಿ ದಲಿತರು ಮತ್ತು ಹಿಂದುಳಿದ ವರ್ಗಗಳ ಮತಗಳನ್ನು ಬಯಸುತ್ತದೆ ಆದರೆ ಅವರ ಗೌರವವನ್ನು ಸ್ವೀಕರಿಸುವುದಿಲ್ಲ ಎಂದು ಪಕ್ಷವು ಹೇಳಿಕೆ ನೀಡಿದೆ. ಕಾಂಗ್ರೆಸ್ ಇದನ್ನು ಸಾಮಾಜಿಕ ಸಮಾನತೆ ಮತ್ತು ಪ್ರಜಾಪ್ರಭುತ್ವ ಮೌಲ್ಯಗಳಿಗೆ ಮಾಡಿದ ಅವಮಾನ ಎಂದು ಕರೆದಿದೆ.

ಉತ್ತರಾಖಂಡ ಕಾಂಗ್ರೆಸ್ ಅಧ್ಯಕ್ಷ ಗಣೇಶ್ ಗೋಡಿಯಾಲ್ ಈ ಘಟನೆಯನ್ನು ಖಂಡಿಸಿದರು. ಇದು ಆಧುನಿಕ ಭಾರತದಲ್ಲಿ ಅಸ್ಪೃಶ್ಯತೆಯಂತಹ ಮನಸ್ಥಿತಿಯನ್ನು ಉತ್ತೇಜಿಸುತ್ತದೆ ಎಂದು ಹೇಳಿದರು. ಕಾಂಗ್ರೆಸ್ ಮಾನವೀಯತೆ, ಸಮಾನತೆ ಮತ್ತು ಸಹೋದರತ್ವವನ್ನು ನಂಬುತ್ತದೆ, ಆದರೆ ಅಂತಹ ಘಟನೆಗಳು ಸಮಾಜದಲ್ಲಿ ವಿಭಜನೆಗಳನ್ನು ಸೃಷ್ಟಿಸುತ್ತವೆ ಎಂದರು. ನೈನಿತಾಲ್‌ನ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಈ ವಿಷಯದ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಸಿ, ಕಾನೂನು ಉಲ್ಲಂಘನೆಗಳು ನಡೆದಿದ್ದರೆ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಗೋಡಿಯಾಲ್ ಒತ್ತಾಯಿಸಿದರು.

# ನೀಟ್ ಪ್ರಕರಣ : ಚರ್ಚೆಗೆ ಸಿದ್ಧ

## 20 ದಿನಗಳ ಬಳಿಕ ಮೌನ ಮುರಿದ ಅಮಿತ್ ಶಾ

ನಡುವೆ ಚರ್ಚೆಗೆ ಒಪ್ಪಿಗೆ ನೀಡಿದ್ದರು. 2026ರ ಸಾರ್ವಜನಿಕ ಪರೀಕ್ಷೆಗಳ (ಅನ್ಯಾಯ ವಿಧಾನಗಳ ತಡೆ) ತಿದ್ದುಪಡಿ ಮಸೂದೆ ಕುರಿತ ಚರ್ಚೆಯ ಸಂದರ್ಭದಲ್ಲಿಯೂ ಯಾವುದೇ ಪ್ರತಿಪಕ್ಷದ ಸಂಸದರು ಓಇಇಖಿ ಪರೀಕ್ಷೆಗೆ ಸಂಬಂಧಿಸಿದ ವಿಷಯವನ್ನ ಸದನದಲ್ಲಿ ಪ್ರಸ್ತಾಪಿಸಿರಲಿಲ್ಲ. ಆದರೂ, ಈ ವಿಚಾರದ ಕುರಿತು ಚರ್ಚಿಸಲು ಸರ್ಕಾರ ಸಂಪೂರ್ಣ ಸಿದ್ಧವಾಗಿದೆ ಎಂದು ಶಾ ಹೇಳಿದ್ದಾರೆ.

ಚರ್ಚೆಗೆ ನಿಗದಿಪಡಿಸುವ ಸಮಯದಲ್ಲಿ ತಾವು ವೈಯಕ್ತಿಕವಾಗಿ ಸದನದಲ್ಲಿ ಹಾಜರಿದ್ದು, ಪ್ರತಿಪಕ್ಷದ ಸಂಸದರು ಕೇಳುವ ಪ್ರಶ್ನೆಗಳಿಗೆ ಉತ್ತರಿಸುವುದಾಗಿ ಅಮಿತ್ ಶಾ ಸ್ಪಷ್ಟಪಡಿಸಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಚರ್ಚೆ ಮತ್ತು ಸಂವಾದದ ಮೂಲಕವೇ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದರಲ್ಲದೇ, ಸಂಸತ್ತು ಚರ್ಚೆ ಮತ್ತು ವಿಚಾರ ವಿನಿಮಯಕ್ಕೆ ವೇದಿಕೆಯಾಗಬೇಕು. ಪ್ರತಿಪಕ್ಷ ಮತ್ತು ಆಡಳಿತ ಪಕ್ಷದ ಸಂಸದರು ತಮ್ಮ ಅಭಿಪ್ರಾಯಗಳನ್ನ ಮುಕ್ತವಾಗಿ ಮಂಡಿಸಲು ಅವಕಾಶ ಕಲ್ಪಿಸುವಂತೆ ಅವರು ಸ್ಪೀಕರ್‌ಗೆ ಮನವಿ ಮಾಡಿದ್ದಾರೆ.

ಈ ಕುರಿತು ಸುದ್ದಿಸಂಸ್ಥೆಗಳೊಂದಿಗೆ ಮಾತನಾಡಿದ್ದ ಶಾ, ಪ್ರತಿಪಕ್ಷ ಎತ್ತಿರುವ ಎಲ್ಲ ವಿಚಾರಗಳ ಕುರಿತು ಚರ್ಚಿಸಲು ಸರ್ಕಾರ ಸಿದ್ಧವಿದೆ. ಪ್ರತಿಪಕ್ಷಗಳು ಲೋಕಸಭಾ ಸ್ಪೀಕರ್‌ಗೆ ಲಿಖಿತ ಮನವಿ ಸಲ್ಲಿಸಿದ್ರೆ, ಮರುದಿನ ಮಧ್ಯಾಹ್ನ 3 ಗಂಟೆಯವರೆಗೆ ಚರ್ಚೆ ಮುಂದುವರಿಸಬಹುದು. ಅಗತ್ಯವಿದ್ದರೆ ಪ್ರಶ್ನೋತ್ತರ ಅವಧಿಯನ್ನು ಕೂಡ ಅಮಾನತುಗೊಳಿಸಿ, ತಡರಾತ್ರಿ ವರೆಗೆ ಅಥವಾ ಮರುದಿನದ ವರೆಗೆ ವಿಸ್ತೃತ ಚರ್ಚೆ ನಡೆಸಲು ಸರ್ಕಾರ ಸಿದ್ಧವಿದೆ ಎಂದಿದ್ದಾರೆ.

ಅನಂತ ಜನಶಕ್ತಿ

ಪತ್ರಿಕೆಯನ್ನು ತಪ್ಪದೇ ಓದಿರಿ

ಜಾಹೀರಾತು ಮತ್ತು ಸುದ್ದಿಗಾಗಿ

ಕೂಡಲೇ ಸಂಪರ್ಕಿಸಿ

# ಕರ್ನಾಟಕದಲ್ಲಿ ಗುಟ್ಕಾ, ತಂಬಾಕು ಪಾನ್ ಮಸಾಲಾ ಬ್ಯಾನ್

ನಿರೀಕ್ಷೆಯಿದೆ.

ಗಂಭೀರ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಬಹುದಾದ ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ಬಳಕೆಯನ್ನು ನಿಯಂತ್ರಿಸುವ ಪ್ರಯತ್ನದ ಭಾಗವಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಮಾರಾಟದ ಮೇಲಿನ ನಿಷೇಧ ಮತ್ತು ನಿರ್ಬಂಧಗಳು "ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ, 2006ರ ಸೆಕ್ಷನ್ 30(2)(ಎ) ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ (ಮಾರಾಟದ ಮೇಲಿನ ನಿಷೇಧ ಮತ್ತು ನಿರ್ಬಂಧಗಳು) ನಿಯಮಾವಳಿ, 2011ರ ನಿಯಮ 2.3.4ರ ಅಡಿಯಲ್ಲಿ ನೀಡಲಾಗಿರುವ ಅಧಿಕಾರವನ್ನು ಚಲಾಯಿಸಿ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ 10-08-2026ರಂದು ಸರ್ಕಾರದ ಅಧಿಸೂಚನೆ ಹೊರಡಿಸಿದೆ" ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತ ಕೆ. ಶ್ರೀನಿವಾಸ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಕರ್ನಾಟಕದಲ್ಲಿ ತಂಬಾಕು ಮತ್ತು ನಿಕೋಟಿನ್ ಹೊಂದಿರುವ ಉತ್ಪನ್ನಗಳ ಮಾರಾಟ ಹಾಗೂ ವಿತರಣೆಯನ್ನು ಈ ಅಧಿಸೂಚನೆಯ ಮೂಲಕ ನಿಷೇಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ನಿಷೇಧಿತ ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ತಯಾರಿಕೆ, ಮಾರಾಟ ಅಥವಾ ವಿತರಣೆ ನಡೆಯುತ್ತಿರುವುದು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಹಾಗೂ ಆರೋಗ್ಯಕರ ಮತ್ತು ವ್ಯಸನಮುಕ್ತ ಕರ್ನಾಟಕ ನಿರ್ಮಾಣಕ್ಕೆ ಸಹಕರಿಸುವಂತೆ ಇಲಾಖೆ ಸಾರ್ವಜನಿಕರಲ್ಲಿ ಮನವಿ ಮಾಡಿದೆ.

ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಕರ್ನಾಟಕದಲ್ಲಿ ತಂಬಾಕು ಮತ್ತು/ಅಥವಾ ನಿಕೋಟಿನ್ ಹೊಂದಿರುವ ಉತ್ಪನ್ನಗಳ ಮಾರಾಟ ಹಾಗೂ ವಿತರಣೆಯನ್ನು ನಿಷೇಧಿಸಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಅಧಿಸೂಚನೆ ಹೊರಡಿಸಿದೆ ಎಂದು ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ.

2026ರ ಆಗಸ್ಟ್ 10ರಂದು ಹೊರಡಿಸಿರುವ ಈ ಅಧಿಸೂಚನೆಯು ಜಾರಿಯಾದ ದಿನದಿಂದ ಒಂದು ವರ್ಷದವರೆಗೆ ರಾಜ್ಯಾದ್ಯಂತ ಜಾರಿಯಲ್ಲಿರಲಿದೆ ಎಂದು ಅವರು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಹಾರ ಸುರಕ್ಷತಾ ವಿಭಾಗವು ತಂಬಾಕು ಮತ್ತು/ಅಥವಾ ನಿಕೋಟಿನ್ ಹೊಂದಿರುವ ಉತ್ಪನ್ನಗಳ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆಹಾರ ಸುರಕ್ಷತಾ ಅಧಿಕಾರಿಗಳ ನೇತೃತ್ವದಲ್ಲಿ ವಿಶೇಷ ತಪಾಸಣೆ ಹಾಗೂ ಜಾರಿ ಕಾರ್ಯಾಚರಣೆಗಳನ್ನು ನಡೆಸಲಾಗುತ್ತಿದ್ದು, ಗುಟ್ಕಾ, ಪಾನ್ ಮಸಾಲಾ ಹಾಗೂ ತಂಬಾಕು ಮತ್ತು/ಅಥವಾ ನಿಕೋಟಿನ್ ಹೊಂದಿರುವ ಇತರ ನಿಷೇಧಿತ ಉತ್ಪನ್ನಗಳ ತಯಾರಿಕೆ, ದಾಸ್ತಾನು, ಸಾಗಣೆ, ವಿತರಣೆ ಮತ್ತು ಮಾರಾಟದ ಮೇಲೆ ನಿಗಾ ವಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

"ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ, 2006ರ ಸೆಕ್ಷನ್ 30(2)(ಎ) ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ (ಮಾರಾಟದ ಮೇಲಿನ ನಿಷೇಧ ಮತ್ತು ನಿರ್ಬಂಧಗಳು) ನಿಯಮಾವಳಿ, 2011ರ ನಿಯಮ 2.3.4ರ ಅಡಿಯಲ್ಲಿ ನೀಡಲಾಗಿರುವ ಅಧಿಕಾರವನ್ನು ಚಲಾಯಿಸಿ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ 10-08-2026ರಂದು ಸರ್ಕಾರದ ಅಧಿಸೂಚನೆ ಹೊರಡಿಸಿದೆ" ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತ ಕೆ. ಶ್ರೀನಿವಾಸ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಕರ್ನಾಟಕದಲ್ಲಿ ತಂಬಾಕು ಮತ್ತು ನಿಕೋಟಿನ್ ಹೊಂದಿರುವ ಉತ್ಪನ್ನಗಳ ಮಾರಾಟ ಹಾಗೂ ವಿತರಣೆಯನ್ನು ಈ ಅಧಿಸೂಚನೆಯ ಮೂಲಕ ನಿಷೇಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ನಿಷೇಧಿತ ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ತಯಾರಿಕೆ, ಮಾರಾಟ ಅಥವಾ ವಿತರಣೆ ನಡೆಯುತ್ತಿರುವುದು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಹಾಗೂ ಆರೋಗ್ಯಕರ ಮತ್ತು ವ್ಯಸನಮುಕ್ತ ಕರ್ನಾಟಕ ನಿರ್ಮಾಣಕ್ಕೆ ಸಹಕರಿಸುವಂತೆ ಇಲಾಖೆ ಸಾರ್ವಜನಿಕರಲ್ಲಿ ಮನವಿ ಮಾಡಿದೆ.

# ನೂತನ ಸಚಿವರಿಗೆ ಖಾತೆ ಭಾಗ್ಯ

ವಹಿಸಲಾಗಿದೆ.

ವಿಧಾನಸಭಾ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿ ಸಂಪುಟ ಸೇರಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜವಾಬ್ದಾರಿ ನಿರ್ವಹಿಸುತ್ತಿದ್ದ ಯು.ಟಿ.ಖಾದರ್ ಅವರಿಗೆ ಅಲ್ಪಸಂಖ್ಯಾತರ ಅಭಿವೃದ್ಧಿ ಮತ್ತು ಹಜ್ ಮತ್ತು ವಕ್ಫ್ ಖಾತೆಗಳನ್ನು ನೀಡಲಾಗಿದೆ. ಆರೋಗ್ಯ ಸಚಿವರಾದ ಬಳಿಕ ಯು.ಟಿ.ಖಾದರ್ ಫೈವ್ ಸ್ಟಾರ್ ಹೋಟೆಲ್ ಗಳ ಮೇಲೆ ಮುಗಿ ಬಿದ್ದಿದ್ದರು. ಈ ಲಾಬಿ ಖಾತೆ ಬದಲಾವಣೆ ಮಾಡುವಂತೆ ಮಾಡಿದೆ ಎಂಬ ಆರೋಪಗಳಿವೆ.

ಕೆ.ಎಸ್.ಬಸಂತಪ್ಪ ಅವರಿಗೆ-ಮೀನುಗಾರಿಕೆ, ಬಂದರು, ಲಕ್ಷ್ಮಣ ಸವದಿ ಅವರಿಗೆ-ಸಹಕಾರ, ಅಜಯ್ ಸಿಂಗ್ ಅವರಿಗೆ-ಅರಣ್ಯ, ಪರಿಸರ ಜೀವಶಾಸ್ತ್ರ, ಬಾಲಕೃಷ್ಣ ಅವರಿಗೆ-ಸಣ್ಣ ನೀರಾವರಿ,

ಉಳಿದಂತೆ ಬಿ.ನಾಗೇಂದ್ರ ಅವರಿಗೆ-ಪೌರಾಡಳಿತ, ಟಿ.ರಘುಮೂರ್ತಿಯವರಿಗೆ-ಪರಿಶಿಷ್ಟ ಪಂಗಡಗಳ ಅಭಿವೃದ್ಧಿ, ಪುಟ್ಟರಂಗ ಶೆಟ್ಟಿ ಅವರಿಗೆ-ಹಿಂದುಳಿದ ವರ್ಗಗಳ ಕಲ್ಯಾಣ-ಪಶುಸಂಗೋಪನೆ, ಶಿವರಾಜ್ ತಂಗಡಗಿ ಅವರಿಗೆ-ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಜಯಾನಂದ ಕಾಶಪ್ಪನವರ್ ಅವರಿಗೆ-ಜವಳಿ, ಕೃಷಿ ಮಾರುಕಟ್ಟೆ, ಕೆ.ಎಂ.ಶಿವಲಿಂಗೇಗೌಡ ಅವರಿಗೆ-ತೋಟಗಾರಿಕೆ, ರೇಷ್ಮೆ, ಪಿ.ಎಂ.ನರೇಂದ್ರಸ್ವಾಮಿಯವರಿಗೆ-ಅಬಕಾರಿ, ರುದ್ರಪ್ಪ ಲಮಾಣಿಯವರಿಗೆ-ಯೋಜನೆ ಮತ್ತು ಸಾಂಖ್ಯಿಕ ಜವಾಬ್ದಾರಿ ನೀಡುವ ಸಾಧ್ಯತೆ ಇದ್ದು, ಇನ್ನೂ ಅಧಿಕೃತವಾಗಿ ಖಚಿತ ಪಟ್ಟಿಲ್ಲ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಆರ್ಥಿಕ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸೇರಿದಂತೆ ಉಳಿದ ಎಲ್ಲಾ ಖಾತೆಗಳನ್ನು ತಮ ಬಳಿ ಉಳಿಸಿಕೊಂಡಿದ್ದಾರೆ.ಈ ಮೊದಲು ಸಂಪುಟ ಸೇರಿದ್ದ 13 ಸಚಿವರ ಪೈಕಿ ಮುನಿಯಪ್ಪ ಅವರನ್ನು ಹೊರತು ಪಡಿಸಿದರೆ ಉಳಿದ ಎಲ್ಲರ ಖಾತೆಗಳು ಯಥಾವತ್ ಮುಂದುವರೆದಿವೆ. ಹೊಸದಾಗಿ ಸಚಿವ ಸಂಪುಟ ಸೇರಿದ 19 ಮಂದಿ ಪೈಕಿ 13 ಜನರಿಗೆ ಖಾತೆ ಹಂಚಿಕೆ ಮಾಡಿ ಹೈಕಮಾಂಡ್ ಪಟ್ಟಿ ರವಾನಿಸಿದೆ.

ಇದೇ ಮೊದಲ ಬಾರಿಗೆ ಕಂತಿನ ರೂಪದಲ್ಲಿ ಖಾತೆಗಳ ಹಂಚಿಕೆಯನ್ನು ಹೈಕಮಾಂಡ್ ಮುಖ್ಯಮಂತ್ರಿಯವರಿಗೆ ರವಾನಿಸುತ್ತಿರುವುದು ಅಚ್ಚರಿ ಮೂಡಿಸಿದೆ.ಸಚಿವ ಸಂಪುಟ ವಿಸ್ತರಣೆಯಾಗಿ 12 ದಿನಗಳ ಬಳಿಕ ಖಾತೆ ಹಂಚಿಕೆಯಾಗುತ್ತಿದೆ. ನಾಳೆಯಿಂದ ವಿಧಾನ ಮಂಡಲದ ಅಧಿವೇಶನ ನಡೆಯುತ್ತಿದ್ದು, ಮುನ್ನಾ ದಿನ ಖಾತೆ ಹಂಚಿಕೆಯಾಗಿದೆ.

# ರಾಜ್ಯ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಎಚ್‌ಡಿಕೆ ವಾಗ್ದಾಳಿ

15 ದಿನಗಳ ಕಾಲ ನಿತ್ಯ 1 ಟಿಎಂಸಿ ನೀರು ಹರಿಸುವಂತೆ ಆದೇಶ ನೀಡಿದೆ. ರಾಜ್ಯಸರ್ಕಾರ ಎಷ್ಟು ಬಾರಿ ಸಂಕಷ್ಟ ಸೂತ್ರಕ್ಕಾಗಿ ಒತ್ತಡ ಹೇರಿದೆ. ಮೇಕೆದಾಟು ಯೋಜನೆ ಜಪ ಮಾಡುತ್ತಾ ಕುಳಿತರೆ ಸಾಲದು ಎಂದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಒಂದು ತಿಂಗಳಿನಿಂದ ಪದೇಪದೇ ದೆಹಲಿಗೆ ಬರುತ್ತಾರೆ. ಒಮ್ಮೆಯಾದರೂ ಸಂಬಂಧಪಟ್ಟ ವಕೀಲರೊಂದಿಗೆ ಚರ್ಚೆ ನಡೆಸಿದ್ದಾರೆಯೇ? ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಪಕ್ಷದ ನಾಯಕರ ಮನೆಯ ಗೇಟ್ ತಟ್ಟಲು ದೆಹಲಿಗೆ ಮುಖ್ಯಮಂತ್ರಿ ಬರುತ್ತಿದ್ದಾರೆ. ರಾಜ್ಯದ ಜನರ ಹಿತಕ್ಕಿಂತ ಅವರಿಗೆ ಕುರ್ಚಿ ಉಳಿಸಿಕೊಳ್ಳುವುದೇ ಮುಖ್ಯವಾಗಿದೆ. ಸಂಪುಟ ವಿಸ್ತರಣೆ, ಖಾತೆ ಹಂಚಿಕೆ ಬಿಕ್ಕಟ್ಟು ಬಗೆಹರಿಸಿಕೊಳ್ಳಲು ಹೈಕಮಾಂಡ್ ಬಾಗಿಲು ತಟ್ಟಲು ದೆಹಲಿಗೆ ಬರುತ್ತಾರೆ ಎಂದು ಆರೋಪಿಸಿದರು.

ಆ.2 ರಂದು ಸರ್ಕಾರ ಕರೆದಿದ್ದ ಸರ್ವಪಕ್ಷ ಸಭೆಯಲ್ಲೆ ಕಾವೇರಿ ಜಲಾನಯನ ಭಾಗದ ಜಲಾಶಯಗಳಿಗೆ ನೀರು ಬರುತ್ತಿದೆ ಎಂದು ಮೈ ಮರೆಯಬೇಡಿ, ಮುನ್ನೆಚ್ಚರಿಕೆ ವಹಿಸಿ ಎಂದು ಸಲಹೆ ನೀಡಿದ್ದೆ. ಆದರೆ ಸರ್ಕಾರ ಬೀಸುವ ದೊಣ್ಣೆಯಿಂದ ಪಾರಾಗಿದ್ದೇವೆ ಎಂದು ತಾತ್ಸಾರ ಮಾಡಿದೆ. ಆಗಸ್ಟ್ ಅಂತ್ಯದಲ್ಲಿ ಸಮಸ್ಯೆ ಎದುರಾಗಲಿದೆ, ಮುನ್ನೆಚ್ಚರಿಕೆ ವಹಿಸಿ ಎಂಬ ಸಲಹೆಯನ್ನು ನೀಡಿದ್ದೆ ಎಂದರು.

ತಮಿಳುನಾಡು ಸರ್ಕಾರ ಕಬಿನಿ ಜಲಾಶಯದಿಂದ 25 ಸಾವಿರ ಕ್ಯೂಸೆಕ್ ನೀರು ಹರಿಸಿದರೂ ಅರ್ಜಿ ಹಾಕಿದೆ. ತಮಿಳುನಾಡಿನ ರೀತಿ ನಮ ರಾಜ್ಯ ಏಕೆ ಮಾಹಿತಿ ಆಧರಿಸಿ ಒತ್ತಡ ಹೇರುತ್ತಿಲ್ಲ? ಕಳೆದ ಮೂರು ವರ್ಷದಲ್ಲಿ ನೀರಾವರಿ ಸಚಿವರಾಗಿದ್ದ ಮುಖ್ಯಮಂತ್ರಿಯವರು ಏನು ಮಾಡಿದ್ದೀರಿ, 2018ರಲ್ಲೆ ಸುಪ್ರಿಂಕೋರ್ಟ್ ತೀರ್ಪು ಬಂದಿದೆ. 8 ವರ್ಷ ಕಳೆದಿದೆ. ಆದರೂ ಸಂಕಷ್ಟ ಸೂತ್ರಕ್ಕೆ ಒತ್ತಡ ತಂದಿಲ್ಲ ಎಂದು ಅವರು ವಾಗ್ದಾಳಿ ಮಾಡಿದರು. ಮಾತೆತ್ತಿದರೆ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುತ್ತಾರೆ. ಒಂದು ವೇಳೆ ಮೇಕೆದಾಟಿಗೆ ಅನುಮತಿ ದೊರೆತರೂ ಅದು ಅನುಷ್ಠಾನವಾಗಲು ಎಷ್ಟು ವರ್ಷ ಬೇಕು? ಅರಣ್ಯದಲ್ಲಿರುವ ಕಾಡುಪ್ರಾಣಿಗಳನ್ನು ಎಲ್ಲಿಗೆ ಬಿಡುತ್ತಿರಿ? ಬೆಂಗಳೂರು ನಗರಕ್ಕೆ ಬಿಡುತ್ತಿರಾ? ಎಂದು ಪ್ರಶ್ನಿಸಿದರು. ಬಿಡದಿ ಉಪನಗರ ಯೋಜನೆ ಅನುಷ್ಠಾನಕ್ಕೆ ತೋರುತ್ತಿರುವ ತರಾತುರಿ ನಾಡಿನ ಹಿತರಕ್ಷಣೆಗೆ ಇಲ್ಲ. ಎಐ ನಗರ ನಿರ್ಮಾಣ ಮಾಡುವುದಾಗಿ ಜಾಹೀರಾತು ನೀಡಲು ಸಮಯವಿದೆ.ಭಾರತ್ ಜೋಡೋ ಸಂಘ ರಚಿಸಿ ಒಂದೊಂದು ಸಂಘಕ್ಕೆ 10 ಲಕ್ಷ ರೂ. ನೀಡುತ್ತಾರಂತೆ.

ಇದಕ್ಕೆ ಎಲ್ಲಿಂದ ಹಣ ಬರುತ್ತದೆ ಎಂದು ಪ್ರಶ್ನಿಸಿದ ಅವರು, ಕಾವೇರಿ ಜಲಾನಯನ ಭಾಗದಲ್ಲಿ ಬೆಳೆದಿದ್ದ ಬೆಳೆಯೂ ಹಾನಿಯಾಗಿದೆ.

ಹೊಸದಾಗಿ ಬೆಳೆ ಹಾಕಲೂ ಆಗಿಲ್ಲ. ರಾಜಕೀಯ ಮಾಡಲು, ರೈತರ ಭೂಮಿ ಒಡೆಯಲು ಮಾತ್ರ ಪುರುಸೊತ್ತಿದೆ ಎಂದು ಅವರು ಆರೋಪಿಸಿದರು.

# ಅದಾನಿ ವಿರುದ್ಧದ ಕೇಸ್ ಕೈಬಿಟ್ಟ ಕೋರ್ಟ್: ಮೋದಿ ವಿರುದ್ಧ ರಾಹುಲ್ ವಾಗ್ದಾಳಿ

ಸ್ಥಿತಿಯಲ್ಲಿದ್ದ ಪ್ರಧಾನಿಯೊಬ್ಬರು ಭಾರತದ ಹಿತಾಸಕ್ತಿಯನ್ನೇ ಬಲಿಕೊಡಬೇಕಾಗಿ ಬಂತು. ಇದಕ್ಕೆ ಭಾರತವು ಭಾರಿ ಬೆಲೆ ತೆರಬೇಕಾಗಿದೆ' ಎಂದು ಪ್ರಧಾನಿ ನರೇಂದ್ರ ಮೋದಿಯನ್ನು ಗುರಿಯಾಗಿಸಿ ಕಿಡಿಕಾರಿದ್ದಾರೆ.

'ಗೌತಮ್ ಅದಾನಿ ಹಾಗೂ ಇತರರ ಮೇಲಿದ್ದ ಸುಮಾರು ಎರಡು ವರ್ಷಗಳ ಹಳೆಯ ಕ್ರಿಮಿನಲ್ ಪ್ರಕರಣವನ್ನು ನ್ಯೂಯಾರ್ಕ್‌ನ ಅಮೆರಿಕ ಫೆಡರಲ್ ನ್ಯಾಯಾಧೀಶರು ವಜಾಗೊಳಿಸಿದ್ದಾರೆ. ಭಾರತೀಯ ತನಿಖೆಯಲ್ಲಿ ಯಾವುದೇ ಅಕ್ರಮ ಪತ್ತೆಯಾಗಿಲ್ಲ ಹಾಗೂ ಸರಿಯಾದ ಸಾಕ್ಷ್ಯಾಧಾರಗಳ ಕೊರತೆ ಇದೆ' ಸೇರಿದಂತೆ ಆರು ಪ್ರಮುಖ ಕಾರಣಗಳನ್ನು ನೀಡಿ ಅಮೆರಿಕದ ನ್ಯಾಯಾಂಗ ಇಲಾಖೆಯು ಆರೋಪಗಳನ್ನು ವಜಾಗೊಳಿಸುವಂತೆ ಮನವಿ ಮಾಡಿತ್ತು. 2024ರ ನವೆಂಬರ್‌ನಲ್ಲಿ ದಾಖಲಾಗಿದ್ದ ಈ ಪ್ರಕರಣದಲ್ಲಿ, ಸೌರ ವಿದ್ಯುತ್ ಗುತ್ತಿಗೆ ಪಡೆಯಲು ಭಾರತ ಸರ್ಕಾರದ ಅಧಿಕಾರಿಗಳಿಗೆ ಲಂಚ ನೀಡಲು ಸಂಚು ರೂಪಿಸಲಾಗಿದೆ ಎಂದು ಗೌತಮ್ ಅದಾನಿ, ಅವರ ಸೋದರಸಂಬಂಧಿ ಸಾಗರ್ ಅದಾನಿ ಹಾಗೂ ಇತರ ಆರು ಜನರ ಮೇಲೆ ಆರೋಪ ಹೊರಿಸಲಾಗಿತ್ತು.

ಆದರೆ ಅದಾನಿ ಸಮೂಹವು ಈ ಎಲ್ಲ ಆರೋಪಗಳನ್ನು ಸಂಪೂರ್ಣವಾಗಿ ತಳ್ಳಿಹಾಕಿತ್ತು. ನ್ಯಾಯಾಲಯದ ತೀರ್ಪನ್ನು ಸ್ವಾಗತಿಸಿರುವ ಗೌತಮ್ ಅದಾನಿ, ಈ ಕಷ್ಟದ ಸಮಯದಲ್ಲಿ ಸತ್ಯ, ನ್ಯಾಯ ಮತ್ತು ಕಾನೂನಿನ ಆಡಳಿತದ ಮೇಲಿದ್ದ ನಮ್ಮ ನಂಬಿಕೆ ಅಲುಗಾಡಲಿಲ್ಲ. ನಮ್ಮ ಮೇಲೆ, ನ್ಯಾಯಾಂಗ ವ್ಯವಸ್ಥೆಯ ಮೇಲೆ ಹಾಗೂ ಭಾರತದ ನ್ಯಾಯ ಒದಗಿಸುವ ಸಾಮರ್ಥ್ಯದ ಮೇಲೆ ನಂಬಿಕೆ ಇಟ್ಟಿದ್ದ ಎಲ್ಲರಿಗೂ ನನ್ನ ಹೃತ್ಪೂರ್ವಕ ಧನ್ಯವಾದಗಳು ಎಂದು ತಿಳಿಸಿದ್ದಾರೆ

# ಕಾವೇರಿ ಕಿಚ್ಚು: ಇಂದು ಕರ್ನಾಟಕ ಬಂದ್!

ಕರ್ನಾಟಕ ಬಂದ್ ನೈತಿಕ ಬೆಂಬಲ ಮಾತ್ರ ನೀಡುತ್ತಿದ್ದೇವೆ. ಶಾಲಾ-ಕಾಲೇಜುಗಳಿಗೆ ನೀಡುವ ನಿರ್ಧಾರವನ್ನು ಹಿಂಪಡೆಯಲಾಗಿದೆ ಎಂದು ಕರ್ನಾಟಕ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ ಆಡಳಿತ ಮಂಡಳಿ ಒಕ್ಕೂಟ ತಿಳಿಸಿದೆ. ಹೀಗಾಗಿ ಶಾಲಾ-ಕಾಲೇಜುಗಳು, ಸಾರಿಗೆ ಸೇವೆಗಳು ಹಾಗೂ ವಾಣಿಜ್ಯ ಚಟುವಟಿಕೆಗಳು ಯಥಾರೀತಿ ನಡೆಯಲಿದ್ದು, ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ. ನಾಳೆ ರಾಜ್ಯದಾದ್ಯಂತ ಬಹುತೇಕ ಎಲ್ಲಾ ಅಗತ್ಯ ಹಾಗೂ ಪ್ರಮುಖ ಸೇವೆಗಳು ಎಂದಿನಂತೆ ಕಾರ್ಯನಿರ್ವಹಿಸಲಿವೆ. ಸಾರಿಗೆ ಸೇವೆಗಳಾದ KSRTC, BMTC ಬಸ್‌ಗಳು, ನಮ್ಮ ಮೆಟ್ರೋ, ರೈಲ್ವೆ ಸೇವೆಗಳು, ಆಟೋ ರಿಕ್ಷಾ ಹಾಗೂ ಟ್ಯಾಕ್ಸಿ ಸೇವೆಗಳು ಎಂದಿನಂತೆ ಲಭ್ಯವಿರಲಿವೆ.

ಇನ್ನು ಆರೋಗ್ಯ ಸೇವೆಗಳಾದ ಆಸ್ಪತ್ರೆಗಳು, ನರ್ಸಿಂಗ್ ಹೋಂಗಳು, ಮೆಡಿಕಲ್ ಶಾಪ್‌ಗಳು ಹಾಗೂ ಆಂಬ್ಯುಲೆನ್ಸ್ ಸೇವೆಗಳು ಯಥಾರೀತಿ ಇರಲಿವೆ.

ಅಗತ್ಯ ಸರಕುಗಳಾದ ದಿನಸಿ ಅಂಗಡಿಗಳು, ಹಾಲು, ತರಕಾರಿ, ಮಾರುಕಟ್ಟೆಗಳು, ಬೇಕರಿ, ಜ್ಯೂಸ್ ಅಂಗಡಿಗಳು ಹಾಗೂ ಬೀದಿ ಬದಿ ವ್ಯಾಪಾರ ವಹಿವಾಟು ನಡೆಯಲಿದೆ.

# ಎಸ್‌ಎಸ್‌ಎಲ್‌ಸಿ ಸಾಧಕ ರೈತರ ಮಕ್ಕಳಿಗೆ 'ಹಾಲಪ್ಪ ಪ್ರತಿಷ್ಠಾನ'ದಿಂದ ಪ್ರತಿಭಾ ಪುರಸ್ಕಾರ



ಅನ್ನ ನೀಡುವ ರೈತನ ಮಕ್ಕಳು ಶೈಕ್ಷಣಿಕ ಕ್ಷೇತ್ರದಲ್ಲೂ ಉನ್ನತ ಸಾಧನೆ ಮಾಡುತ್ತಿರುವುದು ಹೆಮ್ಮೆಯ ಸಂಗತಿ. ಅಂತಹ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಹಾಲಪ್ಪ ಪ್ರತಿಷ್ಠಾನದ ಅಧ್ಯಕ್ಷರಾದ ಮುರುಳಿಧರ್ ಹಾಲಪ್ಪ ತಿಳಿಸಿದರು.

ಇತ್ತೀಚೆಗೆ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿ ಸಾಧನೆ ಮಾಡಿದ ರೈತರ ಮಕ್ಕಳಿಗೆ 'ಹಾಲಪ್ಪ ಪ್ರತಿಷ್ಠಾನ'ದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ "ಪ್ರತಿಭಾ ಪುರಸ್ಕಾರ" ಸಮಾರಂಭದಲ್ಲಿ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಪ್ರತಿಭಾ ಪುರಸ್ಕಾರ ವಿತರಿಸಿ ಅವರು ಮಾತನಾಡುತ್ತಿದ್ದರು.

"ಗ್ರಾಮೀಣ ಭಾಗದ ಹಾಗೂ ರೈತರ ಮಕ್ಕಳು ಸೂಕ್ತ ಸೌಲಭ್ಯಗಳಿಲ್ಲದಿದ್ದರೂ ಕಠಿಣ ಶ್ರಮವಹಿಸಿ ಸಾಧನೆ ಮಾಡುತ್ತಿದ್ದಾರೆ.

ಇಂತಹ ವಿದ್ಯಾರ್ಥಿಗಳ ಪ್ರತಿಭೆಗೆ ಸೂಕ್ತ ವೇದಿಕೆ ಮತ್ತು ಪ್ರೋತ್ಸಾಹ ಸಿಕ್ಕಾಗ ಅವರು ಭವಿಷ್ಯದಲ್ಲಿ ಇನ್ನಷ್ಟು ಎತ್ತರಕ್ಕೆ ಬೆಳೆಯಲು ಸಾಧ್ಯ.

ಪ್ರತಿಷ್ಠಾನದ ಈ ಸಣ್ಣ ನೆರವು ಅವರ ಮುಂದಿನ ಉನ್ನತ ಶಿಕ್ಷಣಕ್ಕೆ ದಾರಿದೀಪವಾಗಲಿ ಎಂಬುದು ನಮ್ಮ ಆಶಯ ಎಂದು ತಿಳಿಸಿದರು.

# ದರೋಜಿ ಕೆರೆ ಸಂರಕ್ಷಣೆಗೆ ಕಟ್ಟುನಿಟ್ಟಿನ ಕ್ರಮ: ಡಿಸಿ ನಾಗೇಂದ್ರ ಪ್ರಸಾದ್

ಬಳ್ಳಾರಿ : ದರೋಜಿ ಕೆರೆಯ ಜಲಚರ ವ್ಯವಸ್ಥೆ ಹಾಗೂ ಪರಿಸರವನ್ನು ಸಂರಕ್ಷಿಸುವ ಜೊತೆಗೆ ಕೆ-ರೆಗೆ ಸೇರುತ್ತಿರುವ ಮಾಲಿನ್ಯವನ್ನು ಸಂಪೂರ್ಣವಾಗಿ ತಡೆಗಟ್ಟಲು ಸಂಬಂಧಪಟ್ಟ ಎಲ್ಲ ಇಲಾಖೆಗಳು ಸಮನ್ವಯದಿಂದ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ನಾಗೇಂದ್ರ ಪ್ರಸಾದ್.ಕೆ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದರೋಜಿ ಕೆರೆ ಅತ್ಯಂತ ಸೂಕ್ಷ್ಮ ಹಾಗೂ ಶ್ರೀಮಂತ ಜಲಚರ ಪರಿಸರ ವ್ಯವಸ್ಥೆಯನ್ನು ಹೊಂದಿದ್ದು, ಇಲ್ಲಿನ ಬೃಹತ್ ಗಾತ್ರದ ಮೀನುಗಳಿಗೆ ಹೊರ ಜಿಲ್ಲೆಗಳಲ್ಲಿಯೂ ಹೆಚ್ಚಿನ ಬೇಡಿಕೆಯಿದೆ ಎಂದು ಹೇಳಿದರು.

ನಾರಿಹಳ್ಳ ಪ್ರದೇಶದಿಂದ ಹರಿದುಬರುವ ನೀರು ಮತ್ತು ಹೂಳು ಕೆರೆಗೆ ಸೇರುತ್ತಿರುವುದರಿಂದ ನೀರಿನ ಸಂಗ್ರಹ ಸಾಮರ್ಥ್ಯ ಕಡಿಮೆಯಾಗುತ್ತಿದೆ. ಅಲ್ಲದೆ, ಕುಡಿತಿನಿ, ಕುರೇಕುಪ್ಪ ಹಾಗೂ ತೋರಣಗಲ್ಲು ಭಾಗಗಳ ಸಂಸ್ಕರಿಸದ ತ್ಯಾಜ್ಯ ನೀರು ಮತ್ತು ಘನತ್ಯಾಜ್ಯ ಕೆರೆಗೆ ಸೇರುತ್ತಿರುವುದು ಮಾಲಿನ್ಯಕ್ಕೆ ಪ್ರಮುಖ ಕಾರಣವಾಗಿದೆ ಎಂದರು.

ಕೆರೆಗೆ ಕಲುಷಿತ ನೀರು ಸೇರುವ ಸ್ಥಳಗಳನ್ನು ಗುರುತಿಸಿ, ನೀರು ಕೆರೆಗೆ ಸೇರುವ ಮುನ್ನವೇ ಸಂಸ್ಕರಿಸಲು ಸ್ಪಷ್ಟವಾದ ಕ್ರಿಯಾ ಯೋಜನೆ ರೂಪಿಸಲಾಗುವುದು. ಕೈಗಾರಿಕಾ ಹಾಗೂ ತ್ಯಾಜ್ಯ ನೀರನ್ನು ಕಡ್ಡಾಯವಾಗಿ ಸಂಸ್ಕರಿಸಿದ ನಂತರವೇ



ಹೊರಗೆ ಬಿಡುವಂತೆ ಸಂಬಂಧಪಟ್ಟವರಿಗೆ ಸೂಚಿಸಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಕೆರೆಯ ದಂಡೆಯ ಸವೆತ ತಡೆಯಲು ಸೂಕ್ತ ಸಸ್ಯಗಳನ್ನು ಬೆಳೆಸುವುದು ಹಾಗೂ ಕೆ-ರೆಯ ಜೀವವೈವಿಧ್ಯವನ್ನು ಸಂರಕ್ಷಿಸುವ ಕ್ರಮ ಕೈಗೊಳ್ಳಲಾಗುವುದು. ದರೋಜಿ ಕೆರೆಯನ್ನು ಮಾಲಿನ್ಯಮುಕ್ತಗೊಳಿಸಿ ಪ್ರವಾಸೋದ್ಯಮ ಕೇಂದ್ರವಾಗಿ ಅಭಿವೃದ್ಧಿಪಡಿಸುವ ಯೋಜನೆಯನ್ನೂ ರೂಪಿಸಲಾಗುತ್ತಿದೆ ಎಂದರು.

ಇದೇ ವೇಳೆ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯ 36 ಕೆರೆಗಳಲ್ಲಿ ಶೇ.30ಕ್ಕಿಂತ ಕಡಿಮೆ ನೀರು ಸಂಗ್ರಹವಾಗಿದ್ದು, ಬಳ್ಳಾರಿ ಹಾಗೂ ಸಿರುಗುಪ್ಪ ತಾಲೂಕುಗಳ ಹಲವು ಕೆರೆಗಳು ಒಣಗುವ ಹಂತ ತಲುಪಿವೆ ಎಂದು ಜಿಲ್ಲಾಧಿಕಾರಿ ಆತಂಕ ವ್ಯಕ್ತಪಡಿಸಿದರು.

ಜಿಲ್ಲೆಯಾದ್ಯಂತ ಇರುವ 46 ಮಳೆ ಮಾಪಕ ಯಂತ್ರಗಳ ಪೈಕಿ ದೋಷಪೂರಿತವಾಗಿರುವ ಯಂತ್ರಗಳನ್ನು ತಕ್ಷಣ ದುರಸ್ತಿಗೊಳಿಸಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ತಾಲೂಕು ಮಟ್ಟದ ವಿಪತ್ತು ನಿರ್ವಹಣಾ ಸಭೆಗಳನ್ನು ನಿಯಮಿತವಾಗಿ ನಡೆಸುವಂತೆಯೂ ನಿರ್ದೇಶನ ನೀಡಿದರು.

ಕುಡಿಯುವ ನೀರು, ಜಾನುವಾರುಗಳಿಗೆ ಮೇವಿನ ಲಭ್ಯತೆ, ಬೆಳೆ ವಿಮೆ ನೋಂದಣಿ, ರಸ್ತೆ ಗುಂಡಿಗಳ ದುರಸ್ತಿ, ಮೇಲ್ಸೇತುವೆಗಳ ನಿರ್ವಹಣೆ ಹಾಗೂ ನಿರಂತರ ವಿದ್ಯುತ್ ಸರಬರಾಜಿಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ವಿಡಿಯೋ ಸಂವಾದದ ಮೂಲಕ ಉಪಸ್ಥಿತರಿದ್ದರು.

# ದೇವರಾಜ ಅರಸು ಜಯಂತಿ ಅರ್ಥಪೂರ್ಣ ಆಚರಣೆಗೆ ಎಡಿಸಿ ಮಹಮ್ಮದ್ ಝುಬೇರ್ ಆಶಯ




ಬಳ್ಳಾರಿ : ಡಿ. ದೇವರಾಜ ಅರಸು ಅವರ ಜಯಂತಿಯನ್ನು ಕೇವಲ ಸಾಂಪ್ರದಾಯಿಕ ಅಥವಾ ನಾಮಕಾವಾಸ್ಥೆ ಆಚರಣೆಯನ್ನಾಗಿ ಮಾಡದೆ, ಸಮಾಜದ ಹಿಂದುಳಿದ ಹಾಗೂ ತಳಸಮುದಾಯಗಳನ್ನು ತಲುಪುವ ಮತ್ತು ಸಬಲೀಕರಿಸುವ ಅರ್ಥಪೂರ್ಣ ಕಾರ್ಯಕ್ರಮವನ್ನಾಗಿ ಆಚರಿಸೋಣ ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್. ಎನ್ ಅವರು ಹೇಳಿದರು.

ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಾಜಿ ಮುಖ್ಯಮಂತ್ರಿ ಡಿ.ದೇವರಾಜು ಅರಸು ಅವರ 111ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಕೇಂದ್ರದಲ್ಲಿ ಆಚರಿಸುವ ಸಂಬಂಧ ಚರ್ಚಿಸಲು ಬುಧವಾರ ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಆಗಸ್ಟ್ 20 ರಂದು ಬೆಳಿಗ್ಗೆ 10.30 ಗಂಟೆ-ಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಿಯಲು ನಿರ್ಧರಿಸಲಾಗಿದ್ದು, ಅರಸು ಅವರ ಜಯಂತಿಯ ಮುಖ್ಯ ಉದ್ದೇಶವೇ ತಳಸಮುದಾಯಗಳ ಧ್ವನಿಯಾಗುವುದು ಎಂದರು.ಹಿಂದುಳಿದ ವರ್ಗಗಳ ಅಡಿಯಲ್ಲಿ ಬರುವ ವಿವಿಧ ಸಣ್ಣ-ಸಣ್ಣ ಸಮುದಾಯಗಳು, ಸಂಘ-ಸಂಸ್ಥೆಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳನ್ನು ಆಹ್ವಾನಿಸಬೇಕು. ಶಿಷ್ಟಾಚಾರದ ಪ್ರಕಾರ ಗಣ್ಯರಿಗೆ ಆಹ್ವಾನ ಪತ್ರಿಕೆ ತಲುಪಿಸಬೇಕು ಎಂದು ಸೂಚಿಸಿದರು.ಡಿ.ದೇವರಾಜು ಅರಸು ಅವರ ಬಗ್ಗೆ ವಿಶೇಷ ಉಪನ್ಯಾಸ ಹಾಗೂ ಮುಖ್ಯ ಭಾಷಣಕ್ಕಾಗಿ ವಿಷಯಾಧಾರಿತ ಹಾಗೂ ಅರ್ಥಪೂರ್ಣ ಸಂದೇಶ ತಲುಪಿಸಲು ಸಂಪನ್ಮೂಲ ವ್ಯಕ್ತಿಗಳನ್ನು ನಿಯೋಜಿಸಬೇಕು ಎಂದರು.

ವಿದ್ಯಾರ್ಥಿಗಳಲ್ಲಿ ನಿರೂಪಣೆ ಮತ್ತು ಪ್ರತಿಭೆಯನ್ನು ಉತ್ತೇಜಿಸಲು ಕಾರ್ಯಕ್ರಮದಲ್ಲಿ ವಿಶೇಷ ಅವಕಾಶ ಕಲ್ಪಿಸಲು ನಿರ್ಧರಿಸಲಾಗುತ್ತಿದ್ದು, ಮೊರಾರ್ಜಿ ದೇಸಾಯಿ ಹಾಗೂ ವಸತಿ ಶಾಲೆಗಳ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಕಾರ್ಯಕ್ರಮದ ನಿರೂಪಣೆ ಮತ್ತು ನಿರ್ವಹಣೆಯ ಜವಾಬ್ದಾರಿ ನೀಡುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ಮೂಡಿಸಲು ತೀರ್ಮಾನಿಸಲಾಯಿತು.

ಅದೇರೀತಿಯಾಗಿ ಶಾಲಾ-ಕಾಲೇಜು ಹಾಗೂ ಹಾಸ್ಟೆಲ್ ಮಟ್ಟದಲ್ಲಿ ಅರಸು ಅವರ ಜೀವನ ಮತ್ತು ಕೊಡುಗೆ ಕುರಿತು ಪ್ರಬಂಧ ಮತ್ತು ಚರ್ಚಾ ಸ್ಪರ್ಧೆಗಳನ್ನು ಆಯೋಜಿಸಿ, ವಿಜೇತರಿಗೆ ಬಹುಮಾನ ವಿತರಿಸಬೇಕು ಎಂದು ಹೇಳಿದರು.

ಸಮಾಜದ ಎಲ್ಲಾ ಸ್ತರದ ಜನರನ್ನು ಒಳಗೊಂಡು, ದೇವರಾಜ ಅರಸು ಅವರ ಆಶಯಗಳಿಗೆ ತಕ್ಕಂತೆ ಈ ಜಯಂತಿಯನ್ನು ಅತ್ಯಂತ ವಿಜೃಂಭಣೆ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಯಿತು.ನಗರದ ಹಿಂದುಳಿದ ಹಾಗೂ ಸಣ್ಣ ಸಣ್ಣ ಸಮುದಾಯಗಳ ಏಳಿಗೆ ಮತ್ತು ಸಂಘಟನೆಗೆ ಬೆಂಬಲ ನೀಡುವ ನಿಟ್ಟಿನಲ್ಲಿ, ಮಹಾನಗರ ಪಾಲಿಕೆಯ ಬಜೆಟ್‌ನಲ್ಲಿ ವಿವಿಧ 25 ಹಿಂದುಳಿದ ವರ್ಗಗಳ ಜಯಂತಿ ಆಚರಣೆಗೆ ತಲಾ ರೂ. 50,000 ಪ್ರೋತ್ಸಾಹಕ ಅನುದಾನ ನೀಡಲು ತೀರ್ಮಾನಿಸಿರುವುದಾಗಿದೆ ಎಂದು ಹೇಳಿದರು.

ಹಿಂದುಳಿದ ಸಮುದಾಯಗಳ ಮುಖಂಡರು ಮತ್ತು ಸಂಘಟಕರು ಈ ಸೌಲಭ್ಯವನ್ನು ತಪ್ಪದೇ ಬಳಸಿಕೊಳ್ಳಬೇಕು ಹಾಗೂ ಜಯಂತಿ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಪಾಲ್ಗೊಂಡು ಕಾರ್ಯಕ್ರಮವನ್ನು ಅರ್ಥಪೂರ್ಣಗೊಳಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಹಾಗೂ ಹಿಂದುಳಿದ ವರ್ಗಗಳ ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಸರ್ಕಾರಿ ಜಮೀನು ಒತ್ತುವರಿ ತೆರವು: ಅಕ್ರಮ ಶೆಡ್‌ಗಳ ನೆಲಸಮ




ಬಳ್ಳಾರಿ : ಮುಂಡರಗಿ ಕೈಗಾರಿಕಾ ಪ್ರದೇಶದ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ನಿರ್ಮಿಸಲಾಗಿದ್ದ ಶೆಡ್‌ಗಳನ್ನು ಕಂದಾಯ ಹಾಗೂ ಪೊಲೀಸ್ ಅಧಿಕಾರಿಗಳ ಸಮ್ಮುಖದಲ್ಲಿ ಬುಧವಾರ ತೆರವುಗೊಳಿಸಲಾಯಿತು. ಸರ್ವೆ ನಂ.177/2ರ 1.07 ಎಕರೆ ಸರ್ಕಾರಿ ಜಮೀನು ಹಾಗೂ ಸರ್ವೆ ನಂ.322ರ 11.40 ಎಕರೆ ಖರಾಬು ಜಮೀನಿನ ಒತ್ತುವರಿಯನ್ನು ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆಯಲಾಯಿತು. ಅಕ್ರಮವಾಗಿ ಸರ್ಕಾರಿ ಜಮೀನು ಒತ್ತುವರಿ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳು ಎಚ್ಚರಿಸಿದರು.

## ಉದ್ಯಮ ಆರಂಭಿಸಿ ಸ್ವಾವಲಂಬಿಗಳಾಗಿ: ಸೋಮಶೇಖರ ಬಿ.

**ಬಳ್ಳಾರಿ : ಸ್ವಂತ ಉದ್ಯಮ ಆರಂಭಿಸುವ ಮೂಲಕ ಆರ್ಥಿಕ ಸ್ವಾವಲಂಬನೆ ಸಾಧಿಸುವುದರ ಜೊತೆಗೆ ಇತರರಿಗೆ ಉದ್ಯೋಗಾವಕಾಶ ಕಲ್ಪಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ ಬಿ. ಹೇಳಿದರು. ಸಿಡಾಕ್ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿರುವ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಅವರು ಪ್ರೋತ್ಸಾಸಿದರು. ಸರ್ಕಾರದ ಯೋಜನೆಗಳು, ಬ್ಯಾಂಕಿಂಗ್ ನೆರವು ಹಾಗೂ ಹಣಕಾಸು ನಿರ್ವಹಣೆ ಕುರಿತು ಉದ್ಯಮಿಗಳು ಅರಿವು ಹೊಂದಿರಬೇಕು ಎಂದು ಸಲಹೆ ನೀಡಿದರು.**

# ಜಕ್ಕಲಿಯಲ್ಲಿ ಹದಗೆಟ್ಟ ರಸ್ತೆ:

## ಶೀಘ್ರ ದುರಸ್ತಿಗೆ ಆಗ್ರಹಿಸಿ ಉಗ್ರ ಹೋರಾಟದ ಎಚ್ಚರಿಕೆ

ರೋಣ: ಗದಗ ಜಿಲ್ಲೆಯ ರೋಣ ತಾಲೂಕಿನ ಜಕ್ಕಲಿ ಗ್ರಾಮದಲ್ಲಿ ದಶಕಗಳಿಂದ ನೆನೆಗುದಿಗೆ ಬಿದ್ದಿರುವ 'ಅಗಸರ ಹಳ್ಳ ಚಾವಡಿ ರಸ್ತೆ'ಯ ದುರಸ್ತಿಗೆ ಒತ್ತಾಯಿಸಿ ಗ್ರಾಮದ ಜಾಗೃತ ಯುವಕರ ಪಡೆ ಈಗ ಆಡಳಿತ ವ್ಯವಸ್ಥೆಯ ವಿರುದ್ಧ ಧ್ವನಿ ಎತ್ತಿದೆ. ಮಂಗಳವಾರ ರೋಣ ತಹಶೀಲ್ದಾರರು, ಕಫಳ ೦ಇಇ ಹಾಗೂ ಜಕ್ಕಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸುದೀರ್ಘ ಮನವಿ ಪತ್ರ ಸಲ್ಲಿಸುವ ಮೂಲಕ ತಕ್ಷಣವೇ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವಂತೆ ಆಗ್ರಹಿಸಿದ್ದಾರೆ. ಇತ್ತೀಚೆಗೆ ಸುರಿದ ಭಾರಿ ಮಳೆಯಿಂದಾಗಿ ಗ್ರಾಮದ ಪ್ರಮುಖ ಸಂಪರ್ಕ ಕೊಂಡಿಯಾಗಿರುವ ಈ ರಸ್ತೆಯು ಸಂಪೂರ್ಣವಾಗಿ ಕೆಸರುಮಯಗೊಂಡಿದ್ದು, ವಾಹನ ಸಂಚಾರವೇ ದುಸ್ತರವಾಗಿದೆ. ರಸ್ತೆಯುದ್ದಕ್ಕೂ ಬಿದ್ದಿರುವ ಬೃಹತ್ ಗುಂಡಿಗಳಲ್ಲಿ ಮಳೆನೀರು ನಿಂತು ಕೆರೆಯಂತಾಗಿದ್ದು, ದಿನನಿತ್ಯ ಓಡಾಡುವ ಸಾರ್ವಜನಿಕರು ಹಾಗೂ ಶಾಲಾ ಮಕ್ಕಳು ನರಕಯಾತನೆ ಅನುಭವಿಸುತ್ತಿದ್ದಾರೆ. ಪ್ರಸ್ತುತ ಕೃಷಿ ಚಟುವಟಿಕೆಗಳು ಚುರುಕುಗೊಂಡಿರುವ ಸಮಯದಲ್ಲೇ ರಸ್ತೆ ಸಂಪೂರ್ಣ ಹಾಳಾಗಿರುವುದರಿಂದ, ರೈತರು ತಮ್ಮ ಬೆಳೆಯನ್ನು ಮಾರುಕಟ್ಟೆಗೆ ಸಾಗಿಸಲು ಹರಸಾಹಸ ಪಡುವಂತಾಗಿದೆ.

# ಕೊಟ್ಟೂರು ಪೊಲೀಸ್ ಠಾಣೆಗೆ ಪ್ರಥಮ ಪಿಐ ಆಗಿ ಡಿ.ದುರುಗಪ್ಪ ಅಧಿಕಾರ ಸ್ವೀಕಾರ



ಕೊಟ್ಟೂರು: ಕೊಟ್ಟೂರು ಪೊಲೀಸ್ ಠಾಣೆಯ ಇತಿಹಾಸದಲ್ಲಿ ಮಹತ್ವದ ಬದಲಾವಣೆಯಾಗಿದ್ದು, ಕೊಟ್ಟೂರು ಪೊಲೀಸ್ ವೃತ್ತವನ್ನು ಸರ್ಕಾರ ಮೇಲ್ದರ್ಜೆಗೇರಿಸಿದ ಹಿನ್ನೆಲೆಯಲ್ಲಿ, ಈವರೆಗೆ ವೃತ್ತ ನಿರೀಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದ ಡಿ.ದುರುಗಪ್ಪ ಅವರು ಕೊಟ್ಟೂರು ಪೊಲೀಸ್ ಠಾಣೆಯ ಪ್ರಥಮ ಪೊಲೀಸ್ ಇನ್ಸ್‌ಪೆಕ್ಟರ್ (ಪಿಐ) ಆಗಿ ಅಧಿಕಾರ ವಹಿಸಿಕೊಂಡಿದ್ದಾರೆ. ಈ ಮೂಲಕ ಠಾಣೆಯ ಇತಿಹಾಸದಲ್ಲಿ ಪ್ರಥಮ ಪಿಐ ಆಗಿ ಡಿ.ದುರುಗಪ್ಪ ಅವರು ಹೊಸ ದಾಖಲೆಗೆ ಪಾತ್ರರಾಗಿದ್ದಾರೆ.

ಕೊಟ್ಟೂರು ಪೊಲೀಸ್ ಠಾಣೆ ಈ ಹಿಂದೆ ಪಿಎಸ್‌ಐ ನೇತೃತ್ವದಲ್ಲಿ ಕಾರ್ಯನಿರ್ವಹಿಸುತ್ತಿತ್ತು. ಠಾಣೆಯನ್ನು ಮೇಲ್ದರ್ಜೆಗೇರಿಸಿದ ನಂತರ ಪೊಲೀಸ್ ಇನ್ಸ್‌ಪೆಕ್ಟರ್ ಹುದ್ದೆ ಸೃಷ್ಟಿಯಾಗಿದ್ದು, ಠಾಣೆಯ ಆಡಳಿತ, ತನಿಖೆ, ಸಿಬ್ಬಂದಿ ಮೇಲ್ವಿಚಾರಣೆ ಹಾಗೂ ಕಾನೂನು ಸುವ್ಯವಸ್ಥೆಯ ಹೆಚ್ಚಿನ ಜವಾಬ್ದಾರಿ ಇದೀಗ ಪಿಐ ಅವರ ಮೇಲಿದೆ.

ಇದೇ ಸಂದರ್ಭದಲ್ಲಿ, ಕೊಟ್ಟೂರು ಠಾಣೆಯಲ್ಲಿ ಪ್ರಥಮ ಮಹಿಳಾ ಪಿಎಸ್‌ಐ ಆಗಿ ದಕ್ಷ ಸೇವೆ ಸಲ್ಲಿಸಿದ್ದ ಗೀತಾಂಜಲಿ ಸಿಂಧೆ ಅವರು ಠಾಣೆ ಮೇಲ್ದರ್ಜೆಗೇರುವ ಮುನ್ನ ಕಾರ್ಯನಿರ್ವಹಿಸಿದ ಕೊನೆಯ ಪಿಎಸ್‌ಐ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಹೀಗಾಗಿ ಕೊಟ್ಟೂರು ಠಾಣೆ-ಯ ಇತಿಹಾಸದಲ್ಲಿ ಗೀತಾಂಜಲಿ ಸಿಂಧೆ ಮತ್ತು ಡಿ.ದುರುಗಪ್ಪ ಅವರ ಸೇವೆ ವಿಶೇಷವಾಗಿ ದಾಖಲಾಗಿದೆ.

ಕೊಟ್ಟೂರು ಪೊಲೀಸ್ ಠಾಣೆ ಮೇಲ್ದರ್ಜೆಗೇರಿದ ಹಿನ್ನೆಲೆಯಲ್ಲಿ ಠಾಣೆಯ ವ್ಯಾಪ್ತಿಯಲ್ಲಿಯೂ ಬದಲಾವಣೆ ಮಾಡಲಾಗಿದೆ. ಈ ಠಾಣೆಯ ವ್ಯಾಪ್ತಿಗೆ ಇದೀಗ 55 ಗ್ರಾಮಗಳು ಸೇರ್ಪಡೆಯಾಗಿವೆ. ಈ ಪ್ರದೇಶಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದು, ಅಪರಾಧ ನಿಯಂತ್ರಣ, ಸಾರ್ವಜನಿಕರ ದೂರುಗಳಿಗೆ ಸ್ಪಂದಿಸುವುದು ಹಾಗೂ ಗಂಭೀರ ಪ್ರಕರಣಗಳ ತನಿಖೆ ನಡೆಸುವ ಜವಾಬ್ದಾರಿ ಕೊಟ್ಟೂರು ಠಾಣೆಯ ಮೇಲಿದೆ.

ಇದರೊಂದಿಗೆ ಈ ಹಿಂದೆ ಕೊಟ್ಟೂರು ಪೊಲೀಸ್ ವೃತ್ತಕ್ಕೆ ಒಳಪಟ್ಟಿದ್ದ ಹೊಸಹಳ್ಳಿ ಪೊಲೀಸ್ ಠಾಣೆಯನ್ನು ಕೂಡ್ಲಿಗಿ ಪೊಲೀಸ್ ಠಾಣೆಯ ವ್ಯಾಪ್ತಿಗೆ ಸೇರಿಸಲಾಗಿದೆ ಎಂದು ತಿಳಿಸಲಾಗಿದೆ.

ಪಿಐ ಡಿ.ದುರುಗಪ್ಪ ಅವರು ತಮ್ಮ 23 ವರ್ಷಗಳ ಪೊಲೀಸ್ ಸೇವೆಯಲ್ಲಿ ದಕ್ಷತೆ ಮತ್ತು ಪ್ರಾಮಾಣಿಕತೆಗೆ ಮೊದಲ ಆದ್ಯತೆ ನೀಡಿಕೊಂಡು ಬಂದಿರುವುದಾಗಿ ತಿಳಿಸಿದ್ದಾರೆ.

ಕೊಟ್ಟೂರು ಠಾಣೆಯ ಸಂಪೂರ್ಣ ಜವಾಬ್ದಾರಿ ಇದೀಗ ತಮ್ಮ ಮೇಲಿರುವುದರಿಂದ ಸಾರ್ವಜನಿಕರೊಂದಿಗೆ ಉತ್ತಮ ರೀತಿಯಲ್ಲಿ ಸ್ಪಂದಿಸಿ, ಕಾನೂನುಬದ್ಧವಾಗಿ ಸಮಸ್ಯೆಗಳಿಗೆ ಪರಿಹಾರ ಒದಗಿಸುವುದಾಗಿ ಹೇಳಿದ್ದಾರೆ.

ಅಪರಾಧ ತಡೆಗಟ್ಟುವುದು, ಗಂಭೀರ ಅಪರಾಧ ಪ್ರಕರಣಗಳ ನೇರ ತನಿಖೆ, ಎಫ್‌ಐಆರ್‌ಗಳ ಮೇಲ್ವಿಚಾರಣೆ, ಸಾಕ್ಷ್ಯ ಸಂಗ್ರಹ, ಸಭೆ-ಸಮಾರಂಭಗಳಿಗೆ ಸೂಕ್ತ ಪೊಲೀಸ್ ಭದ್ರತೆ ಹಾಗೂ ಠಾಣೆಯ ಸಿಬ್ಬಂದಿಗೆ ಕೆಲಸದ ಹಂಚಿಕೆ ಮಾಡುವ ಕಾರ್ಯಗಳ ಮೇಲೂ ವಿಶೇಷ ಗಮನ ಹರಿಸುವುದಾಗಿ ತಿಳಿಸಿದ್ದಾರೆ.

ಪಿಐ ಆಗಿ ಡಿ.ದುರುಗಪ್ಪ ಅವರು ಪಿಎಸ್‌ಐ ಸೇರಿದಂತೆ ಪೊಲೀಸ್ ಸಿಬ್ಬಂದಿಗೆ ಕರ್ತವ್ಯ ಹಂಚಿಕೆ, ಮಾರ್ಗದರ್ಶನ ಹಾಗೂ ಠಾಣೆಯ ಆಡಳಿತಾತ್ಮಕ ಕಾರ್ಯಗಳ ಮೇಲ್ವಿಚಾರಣೆ ಮಾಡಲಿದ್ದಾರೆ. ಸಾರ್ವಜನಿಕರ ದೂರುಗಳಿಗೆ ತ್ವರಿತವಾಗಿ ಸ್ಪಂದಿಸುವುದು ಮತ್ತು ಕಾನೂನು ಸುವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವುದು ತಮ್ಮ ಪ್ರಮುಖ ಆದ್ಯತೆ ಎಂದು ಅವರು ತಿಳಿಸಿದ್ದಾರೆ.

ಇದೇ ವೇಳೆ, ಡಿ.ದುರುಗಪ್ಪ ಅವರಿಗೆ ಶೀಘ್ರದಲ್ಲೇ ಡಿವೈಎಸ್ಪಿ ಹುದ್ದೆಗೆ ಬಡ್ತಿ ದೊರೆಯುವ ಸಾಧ್ಯತೆ ಇದೆ ಎಂಬ ಮಾಹಿತಿ ಪೊಲೀಸ್ ಇಲಾಖೆಯ ಮೂಲಗಳಿಂದ ಕೇಳಿಬಂದಿದೆ.

ಈ ಹಿನ್ನೆಲೆಯಲ್ಲಿ ಅವರು ಮುಂದಿನ ದಿನಗಳಲ್ಲಿ ಮತ್ತಷ್ಟು ಉನ್ನತ ಜವಾಬ್ದಾರಿ ವಹಿಸಿಕೊಳ್ಳುವ ನಿರೀಕ್ಷೆಯೂ ಇದೆ.

ಕೊಟ್ಟೂರು ಪೊಲೀಸ್ ಠಾಣೆ ಮೇಲ್ದರ್ಜೆಗೇರಿರುವುದು ಸ್ಥಳೀಯವಾಗಿ ಮಹತ್ವದ ಬೆಳವಣಿಗೆಯಾಗಿದ್ದು, 55 ಗ್ರಾಮಗಳ ಕಾನೂನು ಸುವ್ಯವಸ್ಥೆಯ ಜವಾಬ್ದಾರಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ಮೂಲಕ ಸಾರ್ವಜನಿಕರಿಗೆ ಉತ್ತಮ ಪೊಲೀಸ್ ಸೇವೆ ದೊ-ರೆಯಲಿ ಎಂಬುದು ಸಾರ್ವಜನಿಕರ ಆಶಯವಾಗಿದೆ. ಡಿ.ದುರುಗಪ್ಪ ಅವರ ಸೇವಾ ಅನುಭವದಿಂದ ಕೊಟ್ಟೂರು ತಾಲೂಕಿನಲ್ಲಿ ಅಪರಾಧ ನಿಯಂತ್ರಣ ಮತ್ತು ಕಾನೂನು ಸುವ್ಯವಸ್ಥೆಗೆ ಮತ್ತಷ್ಟು ಬಲ ಸಿಗುವ ನಿರೀಕ್ಷೆ ವ್ಯಕ್ತವಾಗಿದೆ.

# ಅರ್ಹ ಫಲಾನುಭವಿಗಳಿಗೆ ಸೌಲಭ್ಯ ತಲುಪಿಸಲು ಆರು ಸದಸ್ಯರು ಸಮಿತಿ ರಚನೆ: ಶ್ರೇಣಿ ಕುಮಾರ್ ದೋಖಾ




ಯಾದಗಿರಿ : ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯದಿಂದ ಯಾರೊಬ್ಬರೂ ವಂಚಿತರಾಗದಂತೆ ನೋಡಿಕೊಳ್ಳುವ ಉದ್ದೇಶದಿಂದ ರಾಜ್ಯದ ಎಲ್ಲ ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವಾರ್ಡ್ ಮಟ್ಟದಲ್ಲಿ ಗ್ಯಾರಂಟಿ ಸಮಿತಿಗಳನ್ನು ರಚಿಸಲು ಸರ್ಕಾರ ಆದೇಶಿಸಿದೆ ಎಂದು ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶ್ರೇಣಿಕುಮಾರ ದೋಖಾ ಅವರು ತಿಳಿಸಿದರು.

ಇಲ್ಲಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಮೇಲ್ವಿಚಾರಣೆಗಾಗಿ ಈಗಾಗಲೇ ರಾಜ್ಯ, ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗಿದೆ. ಇದೀಗ ಯೋಜನೆಗಳ ಪ್ರಯೋಜನವನ್ನು ಸ್ಥಳೀಯ ಮಟ್ಟದಲ್ಲೇ ಅರ್ಹ ಫಲಾನುಭವಿಗಳಿಗೆ ತಲುಪಿಸುವ ಉದ್ದೇಶದಿಂದ ಗ್ರಾಮ ಪಂಚಾಯಿತಿ ಹಾಗೂ ವಾರ್ಡ್ ಮಟ್ಟದಲ್ಲೂ ಸಮಿತಿಗಳನ್ನು ರಚಿಸಲು ಸರ್ಕಾರ ಮುಂದಾಗಿದೆ ಎಂದರು.

ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ರಾಜ್ಯಮಟ್ಟದ ಅಧ್ಯಕ್ಷರಾದ ಹೆಚ್.ಎಂ ರೇವಣ್ಣ ಅವರು ಪಂಚಾಯಿತಿ ಮಟ್ಟದಲ್ಲಿ ಸಮಿತಿಗಳನ್ನು ರಚಿಸುವ ಕುರಿತು ಸಲಹೆ ನೀಡಿದ್ದಾರೆ. ಪ್ರತಿ ಗ್ರಾಮ ಪಂಚಾಯಿತಿಗೆ ಆರು ಸದಸ್ಯರ ಸಮಿತಿ ರಚಿಸಲಾಗುವುದು. ಇದರಲ್ಲಿ ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರು, ಮಹಿಳೆಯರು, ಇತರೆ ಹಿಂದುಳಿದ ವರ್ಗ ಹಾಗೂ ಸಾಮಾನ್ಯ ವರ್ಗಕ್ಕೆ ಪ್ರಾತಿನಿಧ್ಯ ನೀಡಲಾಗುತ್ತದೆ ಎಂದು ಹೇಳಿದರು.

ಶಕ್ತಿ, ಗೃಹಲಕ್ಷ್ಮಿ, ಅನ್ನಭಾಗ್ಯ, ಗೃಹಜ್ಯೋತಿ ಹಾಗೂ ಯುವನಿಧಿ ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳು ಅರ್ಹರಿಗೆ ತಲುಪಿದೆಯೇ ಎಂಬುದನ್ನು ಸ್ಥಳೀಯ ಮಟ್ಟದಲ್ಲಿ ಪರಿಶೀಲಿಸಲು ಸಮಿತಿಗಳು ನೆರವಾಗಲಿವೆ.

ಯೋಜನೆಗಳಿಂದ ವಂಚಿತರಾಗಿರುವ ಫಲಾನುಭವಿಗಳನ್ನು ಗುರುತಿಸಿ, ಅವರಿಗೆ ಸೌಲಭ್ಯ ದೊರಕಿಸಿಕೊಡುವ ನಿಟ್ಟಿನಲ್ಲಿ ಸಮಿತಿ ಸದಸ್ಯರು ಕಾರ್ಯನಿರ್ವಹಿಸಲಿದ್ದಾರೆ ಎಂದರು. ನಗರ ಪ್ರದೇಶಕ್ಕೂ ಸಮಿತಿನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿ ಹಾಗೂ ವಾರ್ಡ್ಗಳ ಸಂಖ್ಯೆಗೆ ಅನುಗುಣವಾಗಿ ಸಮಿತಿಗಳ ಸಂಖ್ಯೆಯನ್ನು ನಿಗದಿಪಡಿಸಲಾಗಿದೆ. ಪಟ್ಟಣ ಪಂಚಾಯಿತಿಯಲ್ಲಿ ಎಂಟು ವಾರ್ಡ್ಗಳಿಗೆ ಒಂದು ಸಮಿತಿ, ಪುರಸಭೆಯಲ್ಲಿ ಆರು ವಾರ್ಡ್ಗಳಿಗೆ ಒಂದು, ಗ್ರೇಡ್-2 ನಗರಸಭೆಯಲ್ಲಿ ನಾಲ್ಕು ವಾರ್ಡ್ಗಳಿಗೆ ಒಂದು ಹಾಗೂ ಗ್ರೇಡ್-1ನಗರಸಭೆಯಲ್ಲಿ ಎರಡು ವಾರ್ಡ್ಗಳಿಗೆ ಒಂದು ಸಮಿತಿ ರಚಿಸಲಾಗುತ್ತದೆ. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರತಿ ವಾರ್ಡ್ಗೆ ಒಂದು ಸಮಿತಿ ಇರಲಿದೆ.ಪ್ರತಿ ಸಮಿತಿಯಲ್ಲೂ ಆರು ಸದಸ್ಯರಿದ್ದು, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರು, ಇಬ್ಬರು ಮಹಿಳೆಯರು, ಇತರೆ ಹಿಂದುಳಿದ ವರ್ಗ ಹಾಗೂ ಸಾಮಾನ್ಯ ವರ್ಗಕ್ಕೆ ಪ್ರಾತಿನಿಧ್ಯ ಕಲ್ಪಿಸಲಾಗಿದೆ.

ಅಲ್ಪಸಂಖ್ಯಾತರ ಪ್ರಾತಿನಿಧ್ಯ ಲಭ್ಯವಿಲ್ಲದಿದ್ದಲ್ಲಿ ಸಾಮಾನ್ಯ ವರ್ಗದ ಸದಸ್ಯರನ್ನು ನೇಮಿಸಲು ಅವಕಾಶ ನೀಡಲಾಗಿದೆ.ಜಿಲ್ಲಾ ಉಸ್ತುವಾರಿ ಸಚಿವರಿಗೆ ನೇಮಕಾಧಿಕಾರ ಗ್ರಾಮ ಪಂಚಾಯಿತಿ ಹಾಗೂ ವಾರ್ಡ್ ಮಟ್ಟದ ಗ್ಯಾರಂಟಿ ಸಮಿತಿಗಳ ಸದಸ್ಯರನ್ನು ನೇಮಿಸುವ ಅಧಿಕಾರವನ್ನು ಜಿಲ್ಲಾ ಉಸ್ತುವಾರಿ ಸಚಿವರಿಗೆ ನೀಡಲಾಗಿದೆ.

ಸಮಿತಿಗಳು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಡಿಯಲ್ಲಿ ಕಾರ್ಯನಿರ್ವಹಿಸಲಿವೆ.

8 ದಿನದಲ್ಲಿ ಪ್ರಕ್ರಿಯೆ ಪೂರ್ಣಪಂಚಾಯಿತಿ ಮಟ್ಟದ ಸಮಿತಿಗಳ ರಚನೆ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು. ಎಂಟು ದಿನಗಳೊಳಗೆ ಸದಸ್ಯರ ವಿವರಗಳನ್ನು ಸಂಗ್ರಹಿಸಿ ರಾಜ್ಯಮಟ್ಟಕ್ಕೆ ಕಳುಹಿಸಲಾಗುವುದು.

ಬಳಿಕ ಸಮಿತಿಗಳನ್ನು ಕಾರ್ಯರೂಪಕ್ಕೆ ತಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ವೇಗ ನೀಡಲಾಗುವುದು ಎಂದು ಶ್ರೇಣಿಕುಮಾರ ದೋಖಾ ತಿಳಿಸಿದರು.

ಸ್ಥಳೀಯ ಮಟ್ಟದಲ್ಲಿ ಅರ್ಹ ಫಲಾನುಭವಿಗಳನ್ನು ಗುರುತಿಸಿ, ಸರ್ಕಾರದ ಯೋಜನೆಗಳ ಸೌಲಭ್ಯ ನಿಜವಾದ ಫಲಾನುಭವಿಗಳಿಗೆ ತಲುಪಿಸುವುದೇ ಸಮಿತಿಗಳ ಪ್ರಮುಖ ಉದ್ದೇಶವಾಗಿದೆ. ಈ ಮೂಲಕ ಗ್ಯಾರಂಟಿ ಯೋಜನೆಗಳಿಂದ ಯಾರೂ ವಂಚಿತರಾಗದಂತೆ ವ್ಯವಸ್ಥೆ ರೂಪಿಸಲಾಗುವುದು ಎಂದು ಅವರು ಹೇಳಿದರು.

ಈ ವೇಳೆ ಸಂಜೀವ್ ಕವಲಿ, ಹೊನ್ನೇಶ್ ದೊಡ್ಡಮನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಬೀದಿನಾಯಿಗಳ ದಾಳಿಗೆ ಬೆಚ್ಚಿಬಿದ್ದ ಚಿಕ್ಕನಾಯಕನಹಳ್ಳಿ

# ಪುರಸಭೆ ನಿರ್ಲಕ್ಷ್ಯಕ್ಕೆ ಜನರ ಆಕ್ರೋಶ

ಚಿಕ್ಕನಾಯಕನಹಳ್ಳಿ: ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಬೀದಿನಾಯಿಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಸಾರ್ವಜನಿಕರು ಆತಂಕದಲ್ಲೇ ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಪ್ರಮುಖ ರಸ್ತೆ ಹಾಗೂ ಜನವಸತಿ ಪ್ರದೇಶಗಳಲ್ಲಿ ಗುಂಪು ಗುಂಪಾಗಿ ನಾಯಿಗಳು ಓಡಾಡುತ್ತಿರುವುದು ನಿವಾಸಿಗಳಲ್ಲಿ ಭಯ ಮೂಡಿಸಿದೆ.

ಶಾಲಾ ಮಕ್ಕಳು, ಮಹಿಳೆಯರು, ವೃದ್ಧರು ಹಾಗೂ ದ್ವಿಚಕ್ರ ವಾಹನ ಸವಾರರು ನಾಯಿಗಳ ದಾಳಿಯ ಆತಂಕ ಎದುರಿಸುತ್ತಿದ್ದಾರೆ. ಇತ್ತೀಚೆಗೆ ವೃದ್ಧರ ಮೇಲೆ ಬೀದಿನಾಯಿಗಳು ದಾಳಿ ನಡೆಸಿದ ಘಟನೆ ಬಳಿಕ ಪಟ್ಟಣದ ಜನರಲ್ಲಿ ಆತಂಕ ಮತ್ತಷ್ಟು ಹೆಚ್ಚಾಗಿದೆ. ಕ್ರಮಕ್ಕೆ ಸೂಚನೆ ನೀಡಿದರೂ ಸಮಸ್ಯೆ ಮುಂದುವರಿಕೆ

ನಾಯಿಗಳ ಹಾವಳಿ ಕುರಿತು ದೂರುಗಳು ಹೆಚ್ಚಾದ ಹಿನ್ನೆಲೆಯಲ್ಲಿ ಉಪವಿಭಾಗಾಧಿಕಾರಿ ಹಾಗೂ ಆಡಳಿತಾಧಿಕಾರಿ ಸಪ್ತಶ್ರೀ ಅವರು ತಕ್ಷಣ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದರು ಎನ್ನಲಾಗಿದೆ. ಆದ-ರೆ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯದಿರುವುದಕ್ಕೆ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಂತಾನೋತ್ಪತ್ತಿ ನಿಯಂತ್ರಣ ಸೇರಿದಂತೆ ವೈಜ್ಞಾನಿಕ ರೀತಿಯಲ್ಲಿ ನಾಯಿಗಳ ಸಂಖ್ಯೆಯನ್ನು ನಿಯಂತ್ರಿಸುವ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ಎರಡು ಬಾರಿ ಟೆಂಡರ್, ಆದರೂ ಫಲಿತಾಂಶ ಶೂನ್ಯ ಬೀದಿನಾಯಿಗಳನ್ನು ಹಿಡಿದು ನಿಯಂತ್ರಿಸುವ ಸಂಬಂಧ ಪುರಸಭೆ ಎರಡು ಬಾರಿ ಟೆಂಡರ್ ಕರೆದಿದ್ದರೂ, ಗುತ್ತಿಗೆದಾರರು ಭಾಗವಹಿಸದ ಹಿನ್ನೆಲೆಯಲ್ಲಿ ಪ್ರಕ್ರಿಯೆ ಸ್ಥಗಿ-ತಗೊಂಡಿದೆ ಎನ್ನಲಾಗಿದೆ.

ಪರ್ಯಾಯ ವ್ಯವಸ್ಥೆ ರೂಪಿಸದೆ ಪ್ರಕ್ರಿಯೆಯನ್ನು ಕೈಬಿಟ್ಟಿರುವುದೇ ಸಮಸ್ಯೆ ಮತ್ತಷ್ಟು ಗಂಭೀರವಾಗಲು ಕಾರಣವಾಗಿದೆ ಎಂಬ ಆರೋಪ ಕೇಳಿಬಂದಿದೆ."ಪ್ರತಿ ವರ್ಷ ನಿಯಮಿತವಾಗಿ ನಾಯಿಗಳ ಸಂತಾನೋತ್ಪತ್ತಿ ನಿಯಂತ್ರಣ ಹಾಗೂ ಅಗತ್ಯ ಕ್ರಮಗಳನ್ನು ಕೈಗೊಂಡಿದ್ದರೆ ಇಂದಿನ ಪರಿಸ್ಥಿತಿ ಎದುರಾಗುತ್ತಿರಲಿಲ್ಲ" ಎಂದು ನಿವಾಸಿಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಜೀವಭಯದಿಂದ ಹೊರಬರಲು ಹಿಂದೇಟು ಬೆಳಗಿನ ಜಾವ ಹಾಗೂ ರಾತ್ರಿ ವೇಳೆ ಮನೆಗಳಿಂದ ಹೊರಬರುವುದು ಕಷ್ಟವಾಗಿದೆ ಎಂದು ಸ್ಥಳೀಯರು ಅಳಲು ತೋಡಿಕೊಂಡಿ-ದ್ದಾರೆ. ಮನೆ ಬಾಗಿಲು ತೆರೆಯುವಾಗಲೂ ಎಚ್ಚರಿಕೆ ವಹಿಸಬೇಕಾದ ಪರಿಸ್ಥಿತಿ ಇದೆ.



"ಬೆಳಗ್ಗೆ ಮನೆ ಬಾಗಿಲು ತೆರೆಯುವುದೇ ಭಯವಾಗುತ್ತಿದೆ. ನಾಯಿಗಳು ಗುಂಪಾಗಿ ಬಂದು ಆಕ್ರಮಣಕಾರಿಯಾಗಿ ವರ್ತಿಸುತ್ತವೆ. ಮಕ್ಕಳನ್ನು ಒಬ್ಬರೇ ಹೊರಗೆ ಕಳುಹಿಸಲು ಸಾಧ್ಯವಾಗುತ್ತಿಲ್ಲ. ಪುರಸಭೆ ಕೂಡಲೇ ಕ್ರಮ ಕೈಗೊಳ್ಳಬೇಕು," ಎಂದು ಪಟ್ಟಣದ ನಿವಾಸಿ ಪುಷ್ಪಾ ಒತ್ತಾಯಿಸಿದ್ದಾರೆ. ಮಕ್ಕಳು ಮತ್ತು ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಜನವಸತಿ ಪ್ರದೇಶಗಳಲ್ಲಿ ಬೀದಿನಾಯಿಗಳ ಹಾವಳಿ ನಿಯಂತ್ರಿಸಲು ತುರ್ತು ಹಾಗೂ ಶಾಶ್ವತ ಕ್ರಮ ಕೈಗೊಳ್ಳಬೇಕು ಎಂಬುದು ಪಟ್ಟಣದ ಜನರ ಒಕ್ಕೊರಲಿನ ಆಗ್ರಹವಾಗಿದೆ

## ಕೆ ಎಸ್ ಶಿಲ್ಪಾ ರವರಿಗೆ ಪಿಎಚ್‌ಡಿ ಪ್ರದಾನ

ಕುಣಿಗಲ್ : ಕನ್ನಡ ವಿಶ್ವವಿದ್ಯಾಲಯ, ಹಂಪಿ ವಿದ್ಯಾರಣ್ಯ 583 276. ಹೊಸಪೇಟೆ ತಾಲೂಕು. ವಿಜಯನಗರ ಜಿಲ್ಲೆ, ಕರ್ನಾಟಕ ಸಂಖ್ಯೆ:ಕವಿಹಂ:ಕುಸ:ಪಿಎಚ್.ಡಿ:ಅ.ಸ ೂ/2026-27/03 ಅಭ್ಯರ್ಥಿಯು ಸಲ್ಲಿಸಿದ ಪಿಎಚ್.ಡಿ. ಮಹಾಪ್ರಬಂಧವು ದಿನಾಂಕ 18.06.2026 ರಂದು ನಡೆದ ಪರೀಕ್ಷಾ ಮಂಡಳಿಯ ಶಿಫಾರಸ್ಸಿನ ಮೇರೆಗೆ ಹಾಗೂ ಕನ್ನಡ ವಿಶ್ವವಿದ್ಯಾಲಯದ



ಅಧಿನಿಯಮ 1991ರ ನಿಯಮ 23(6) ಹಾಗೂ ಯು.ಜಿ.ಸಿ.ಯ Minimum Standards and Procedures for Award of Ph.D Degree Regulation 2022 notified on Gazette of India on 7th November 2022 ಅನ್ವಯ ಪಿಎಚ್.ಡಿ. ಪದವಿಗೆ ಅರ್ಹವಾಗಿದೆಯೆಂದು ಶಿಲ್ಪಾ ಕೆ ಎಸ್ ರವರನ್ನು ಮಾನ್ಯ ಕುಲಪತಿಗಳು ಘೋಷಿಸಿದರು. ಸ್ನಾತಕೋತ್ತರ ಪದವಿ : ಕನ್ನಡ ನೋಂದಣಿ ಸಂಖ್ಯೆ : 172001020083/04.01.2018 ಪಿಎಚ್.ಡಿ. ಶೀರ್ಷಿಕೆ,ಶಿಲ್ಪಾ ಕೆ ಎಸ್ ರವರುಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ ಕಥನ ಸಾಹಿತ್ಯದ ತಾತ್ವಿಕ ವಿನ್ಯಾಸಗಳು ಕನ್ನಡ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಪಿಎಚ್.ಡಿ ಪದವಿಯನ್ನು ಪಡೆಯಲು ಅರ್ಹರಾಗಿರುತ್ತಾರೆಂದು ಈ ಮೂಲಕ ಘೋಷಿಸಿದೆ.

**ಅನಂತ ಜನಶಕ್ತಿ**

ಪತ್ರಿಕೆಗೆ ಜಿಲ್ಲಾ ಹಾಗೂ ತಾಲೂಕು ವರದಿಗಾರರು ಬೇಕಾಗಿದ್ದಾರೆ..

ಆಸಕ್ತಿ ಇದ್ದವರು ಕೂಡಲೇ ಸಂಪರ್ಕಿಸಿ

## 61 ವರ್ಷದ ವ್ಯಕ್ತಿ ನಾಪತ್ತೆ: ಪತ್ತೆಗೆ ಮನವಿ

ಬಳ್ಳಾರಿ : ನಗರದ ಎಪಿಎಂಸಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮಹಾರಾಷ್ಟ್ರದ ಸೊಲ್ಲಾಪುರ ನಿವಾಸಿ ಹನುಮಂತ ಬಾಲಪ್ಪ ಮೇತ್ರೆ (61) ನಾಪತ್ತೆಯಾಗಿದ್ದಾರೆ. ಆ.9ರಂದು ಮನೆಯಿಂದ ಹೊರಗೆ ಹೋಗಿ ಬರುವುದಾಗಿ ಹೇಳಿ ತೆರಳಿದ ಅವರು ವಾಪಸ್ ಬಂದಿಲ್ಲ. 5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ದುಂಡು ಮುಖ ಹೊಂದಿದ್ದು, ಹೊರಡುವಾಗ ಹಳದಿ ಬಣ್ಣದ ತುಂಬು ತೋಳಿನ ಅಂಗಿ ಹಾಗೂ ಕಾಫಿ ಬಣ್ಣದ ಪ್ಯಾಂಟ್ ಧರಿಸಿದ್ದರು. ಮರಾಠಿ, ತೆಲುಗು ಮಾತನಾಡುತ್ತಾರೆ. ಮಾಹಿತಿ ದೊರೆತಲ್ಲಿ ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆ 08392-250033, 9480803096 ಅಥವಾ ಪೊಲೀಸ್ ಕಂಟ್ರೋಲ್ ರೂಂ 08392-258100 ಸಂಪರ್ಕಿಸುವಂತೆ ಪೊಲೀಸರು ಮನವಿ ಮಾಡಿದ್ದಾರೆ.

# 3ನೇ ದಿನ ಅಬ್ಬೆ ತುಮಕೂರು ಶ್ರೀಗಳು ಪರಂಪರಾ ಪಾದಯಾತ್ರೆ ಯಶಸ್ವಿ



ಯಾದಗಿರಿ: ಅಬ್ಬೆತುಮಕೂರಿನ ಪೀಠಾಧಿಪತಿ ಡಾ.ಗಂಗಾಧರ ಮಹಾಸ್ವಾಮಿಗಳ ನೇತೃತ್ವದಲ್ಲಿ ನಡೆಯುತ್ತಿರುವ ಪರಂಪರಾ ಪಾದಯಾತ್ರೆ ಹೆಡಗಿಮದ್ರಾದ ಶ್ರೀ ಶಾಂತ ಶಿವಯೋಗಿ ಮಠಕ್ಕೆ ತಲುಪಿ ನಂತರ ಎಂದು ಮಠದ ಕಾರ್ಯದರ್ಶಿ ಮಹೇಶ್ ಸ್ವಾಮಿ ತಿಳಿಸಿದ್ದಾರೆ.

ಗಂವ್ಹಾರದಿಂದ ಪ್ರಾರಂಭವಾದ ಪಾದಯಾತ್ರೆ ಸನ್ನತಿಯ ಚಂದ್ರಲಾಂಭ ದೇವಸ್ಥಾನವನ್ನು ತಲುಪಿ ಅಲ್ಲಿಯೇ ಪಾದಯಾತ್ರಿಗಳು ವಾಸ್ತವ್ಯ ಮಾಡಿದರು. ಬೆಳಿಗ್ಗೆ ಚಂದ್ರಲಾಂಭ ಪರಮೇಶ್ವರಿಗೆ ಡಾ.ಗಂಗಾಧರ ಮಹಾಸ್ವಾಮಿಗಳು ವಿಶೇಷ ಪೂಜೆಯನ್ನು ನೆರವೇರಿಸಿ ಎರಡನೆಯ ದಿನದ ಪಾದಯಾತ್ರೆಯನ್ನು ಪ್ರಾರಂಭಿಸಿದರು.

2ನೇ ದಿನದ ಪಾದಯಾತ್ರೆ ಕನಗಾನಹಳ್ಳಿ ಮಾರ್ಗವಾಗಿ ಹೊರಟು ಉಳವಂಡಗೇರಾ ಗ್ರಾಮವನ್ನು ತಲುಪಿದಾಗ ಅಲ್ಲಿನ ಭಕ್ತರು ಶ್ರೀಗಳ ಪಾದಪೂಜೆಯನ್ನು ನೆರವೇರಿಸಿದರು.

ಅಲ್ಲಿ ಏರ್ಪಡಿಸಿದ್ದ ಪ್ರಸಾದವನ್ನು ಪಾದಯಾತ್ರಿಗಳು ಸ್ವೀಕರಿಸಿ ಮುಂದೆ ಹೊರಟರು.ಅಲ್ಲಿಂದ ಮುಂದೆ ಸಾಗಿದ ಪಾದಯಾತ್ರೆ ಬನ್ನೆಟ್ಟಿ ಗ್ರಾಮವನ್ನು ತಲುಪಿತು. ನಂತರ ಶ್ರೀವಿಶ್ವಾರಾಧ್ಯರ ದರ್ಶನ ಕಟ್ಟೆಯಲ್ಲಿ ಶಿವಲಿಂಗಪ್ಪ ಸಾಹು ಕೂಡಿ ಫರಹತಾಬಾದ್ ಹಾಗೂ ಅವರ ಬಳಗದವರು ಏರ್ಪಡಿಸಿದ್ದ ಪ್ರಸಾದವನ್ನು ಎಲ್ಲ ಭಕ್ತರೊಂದಿಗೆ ಶ್ರೀಗಳು ಸೇವನೆ ಮಾಡಿದರು.

ಹಾಗೆ ಮುಂದೆ ಹೊರಟ ಪಾದಯಾತ್ರೆ ತಳಕ ಗ್ರಾಮವನ್ನು ತಲುಪಿತು. ಅಲ್ಲಿ ಗ್ರಾಮದೇವತೆ ಹಾಗೂ ವೀರಾಂಜನೇಯ ಸ್ವಾಮಿ ಮಂದಿರದಲ್ಲಿ ಶ್ರೀಗಳು ವಿಶೇಷ ಪೂಜೆ ನೆರವೇರಿಸಿದರು. ತಳಕ ಗ್ರಾಮದ ಭಕ್ತರ ಪ್ರಸಾದ ಸ್ವೀಕರಿಸಿ ಪಾದಯಾತ್ರಿಗಳು ಹೆಡಗಿಮದ್ರಾ ಗ್ರಾಮ ತಲುಪಿದರು.

ಅಲ್ಲಿ ಮಲ್ಲರೆಡ್ಡಪ್ಪ ಸಾಹು ಅರಿಕೇರಿ ಅವರ ಮನೆಯಲ್ಲಿ ಪಾದಯಾತ್ರಿಗಳು ಫಲಹಾರ ಸ್ವೀಕರಿಸಿ ಹಾಗೆ ಮುಂದೆ ಸಾಗಿ ಭೀಮರೆಡ್ಡಿ ಸಾಹುಕಾರ ಅವರು ಏರ್ಪಡಿಸಿದ ಪ್ರಸಾದವನ್ನು ಸ್ವೀಕರಿಸಿ ಹೆಡಗಿಮದ್ರಾ ಶ್ರೀ ಶಾಂತಶಿವಯೋಗಿ ಮಠವನ್ನು ತಲುಪಿದರು. ಹೆಡಗಿಮದ್ರಾ ಮಠದಲ್ಲಿ ರಾತ್ರಿ ಇಡೀ ಭಜನೆ, ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.ಬಸವಂತಪೂರದ ಶಿವು ಸಾಹುಕಾರ ಏರ್ಪಡಿಸಿದ ಪ್ರಸಾದವನ್ನು ಸ್ವೀಕರಿಸಿದ ಪಾದಯಾತ್ರಿಗಳು ಮಠದಲ್ಲಿ ವಾಸ್ತವ್ಯ ಮಾಡಿದರು.ಮೂರನೇ ದಿನದ ಪಾದಯಾತ್ರೆ ಹೆಡಗಿಮದ್ರಾದ ಮಠದಲ್ಲಿ

ಅಮವಾಸ್ಯೆಯ ಪೂಜಾ ವಿಧಾನಗಳನ್ನು ನೆರವೇರಿಸಿಕೊಂಡು ಹೋತಪೇಟೆಯ ಮಲರೆಡ್ಡಿಗೌಡ, ಶಹಾಪುರದ ಮರೆಪ್ಪ ಹಯ್ಯಾಳಕರ್ ಏರ್ಪಡಿಸುವ ಪ್ರಸಾದವನ್ನು ಸ್ವೀಕರಿಸಿ ಠಾಣಗುಂದಿ ಗ್ರಾಮವನ್ನು ತಲುಪುವುದು.ಅಲ್ಲಿ ಗ್ರಾಮಸ್ಥರು ಏರ್ಪಡಿಸುವ ಮಧ್ಯಾಹ್ನದ ಪ್ರಸಾದವನ್ನು ಸ್ವೀಕರಿಸಿ ಸಂಜೆ ಹೊತ್ತಿಗೆ ಅಬ್ಬೆತುಮಕೂರಿನ ಪಾದಗಟ್ಟೆಗೆ ತಲುಪಿದೆ ಎಂದು ಅವರು ತಿಳಿಸಿದ್ದಾರೆ.

# ಜನಪರ ಕಾರ್ಯದಿಂದ ವೈಕೆಆರ್ ಇನ್ನೂ ಜೀವಂತ ಡಾ.ಜ.ವಿ. ಆನಂದಮೂರ್ತಿ

ಕುಣಿಗಲ್: ಮಾಜಿ ಸಚಿವ ದಿವಂಗತ ವೈ. ಕೆ.ರಾಮಯ್ಯ ಸಾಹಿತ್ಯಾಸಕ್ತರಾಗಿದ್ದರಲ್ಲದೆ, ಅವರು ಜನಪರ ರಾಜಕಾರಣಿಯೂ ಆಗಿದ್ದರು. ಇತಿಹಾಸದ ಬಗ್ಗೆ ಆಳವಾದ ಅಧ್ಯಯನ ನಡೆಸಿದ್ದ ಅವರು ತಮ್ಮ ಜನಪರ ಕಾರ್ಯ ಹಾಗೂ ಹೋರಾಟಗಳ ಮೂಲಕ ಇತಿಹಾಸದ ಪುಟಗಳಲ್ಲಿ ಶಾಶ್ವತವಾಗಿ ಉಳಿದಿದ್ದಾರೆ ಎಂದು ವಿಮರ್ಶಕ ಹಾಗೂ ಕವಿ ಡಾ.ಜ.ವಿ.ಆನಂದಮೂರ್ತಿ ಹೇಳಿದರು.

ಪಟ್ಟಣದ ಕನ್ನಡ ಭವನದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಿದ್ದ ವೈ.ಕೆ.ರಾಮಯ್ಯ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿ, ಜ. ಏ. ರಾಮಯ್ಯ ಅವರು ರಾಜಕಾರಣಿ, ಸಾಹಿತಿ ಹಾಗೂ ಪರಿಸರ ಪ್ರೇಮಿಯಾಗಿದ್ದರು ಬಹುಮುಖ ಪ್ರತಿಭೆಯ ವ್ಯಕ್ತಿಯಾಗಿದ್ದರು. ಉತ್ತಮ ಜೀವನ ನಡೆಸಿದ ಅವರು ತಮ್ಮ ಮೂಲಕ ಸಮಾಜಕ್ಕೆ ಮಾದರಿಯಾಗಿದ್ದಾರೆ ಎಂದರು. ಕಾರ್ಯಗಳ

ಇತಿಹಾಸದ ಬಗ್ಗೆ ಹೊಂದಿದ್ದ ಆಸಕ್ತಿ ಹಾಗೂ ಅಧ್ಯಯನದ ಫಲವಾಗಿ ತಾಲೂಕು ಮಾತ್ರವಲ್ಲದೆ ರಾಜ್ಯದ ಇತಿಹಾಸದಲ್ಲೂ ತಮ್ಮದೇ ಆದ ಕೊಡುಗೆ ನೀಡಿದರು. ವಿಶಿಷ್ಟ ಶೈಲಿಯ ಜನಪರ ರಾಜಕಾರಣದಿಂದ ರಾಜ್ಯದಾದ್ಯಂತ ಪರಿಚಿತರಾಗಿದ್ದರು. ಅವರ ವಿಭಿನ್ನ ಹೋರಾಟ ಅಂದ್ರೆ ಎನ್. ಎಚ್. 48 ರೋಡಿಗೆ ಗೋಡೆ ಕಟ್ಟಿ ಉಪವಾಸ ಸತ್ಯಾಗ್ರಹ ಫಲವಾಗಿ ಹೇಮಾವತಿ ನೀರು ತುಮಕೂರು ಜಿಲ್ಲೆಗೆ ಮತ್ತು ಕುಣಿಗಲ್ ಗೆ ಹರಿಯಲು ಸಹಕಾರಿಯಾಯಿತು ಎಂದು




ಹೇಳಿದರು.

ಪರಿಸರ ಸಂರಕ್ಷಣೆಯ ಬಗ್ಗೆಯೂ ವಿಶೇಷ ಕಾಳಜಿ ಹೊಂದಿದ್ದ ರಾಮಯ್ಯ ಅವರು ರಸ್ತೆ ಬದಿಗಳಲ್ಲಿ ಸಸಿಗಳನ್ನು ನೆಡುವಂತೆ ಜನರಲ್ಲಿ ಜಾಗೃತಿ ಮೂಡಿಸಲು ಪಾದಯಾತ್ರೆ ನಡೆಸಿದ್ದರು. ಸಾವಿರಾರು ಗಿಡ-ಮರಗಳನ್ನು

ನೆಡುವ ಮೂಲಕ ಸಾಲುಮರದ ಸರದಾರ' ರಾಮಯ್ಯ ಎಂಬ ಖ್ಯಾತಿಗೆ ಪಾತ್ರರಾಗಿದ್ದರು. ಅವರ ಹೋರಾಟದ ಸ್ಫೂರ್ತಿ ಮತ್ತು ತತ್ವಗಳು ಇಂದಿನ ಯುವಜನತೆ ಹಾಗೂ ರಾಜಕಾರಣಿಗಳಿಗೆ ಮಾದರಿಯಾಗಿವೆ ಎಂದರು.

ದತ್ತಿ ಉಪನ್ಯಾಸದ ಆಶಯ ಮಹತ್ವದ್ದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ಸಿದ್ದಲಿಂಗಯ್ಯ ಮಾತನಾಡಿ, ಜಿಲ್ಲೆಯಾದ್ಯಂತ ಸಾಹಿತ್ಯ ಪರಿಷತ್ ವತಿಯಿಂದ 40 ದತ್ತಿ ಉಪನ್ಯಾಸಗಳ ಸರಣಿಯನ್ನು ನಡೆಸಲಾಗುತ್ತಿದೆ. ವಾರ್ಷಿಕ ದತ್ತಿಯಿಂದ ಬರುವ ನಿಧಿ. ಅದರ ಆಶಯ ಹಾಗೂ ಉದ್ದೇಶ ಮಹತ್ವದ್ದಾಗಿದೆ. ಸಾಹಿತ್ಯಾಸಕ್ತರು ಹಾಗೂ ಹಲವು ಮಹನೀಯರು ನೀಡಿರುವ ದತ್ತಿಯಿಂದಾಗಿ ಸಾಹಿತ್ಯ ಪರಿಷತ್ತಿನ ದತ್ತಿ ಪ್ರಶಸ್ತಿಗಳ ಮೊತ್ತವೂ ಇತರೆ ಹಲವು ಸಾಹಿತ್ಯ ಪ್ರಶಸ್ತಿಗಳಿಗಿಂತ ಹೆಚ್ಚಾಗಿದೆ ಎಂದರು.

ಕಸಾಪ ತಾಲೂಕು ಅಧ್ಯಕ್ಷ ಡಾ.ಕಪನಿಪಾಳ್ಯ ರಮೇಶ್ ಮಾತನಾಡಿ, ತಾಲೂಕಿನ ಸಮಗ್ರ ಅಭಿವೃದ್ಧಿಗೆ ಕೊಡುಗೆ ನೀಡಿದ ರಾಜಕಾರಣಿಗಳು, ಸಾಹಿತಿಗಳು ಹಾಗೂ ವಿವಿಧ ಕ್ಷೇತ್ರಗಳ ಸಾಧಕರ ಕುರಿತು ಇಂದಿನ ಯುವಜನತೆಗೆ ಅರಿವು ಮೂಡಿಸುವ ಉದ್ದೇಶದಿಂದ ದತ್ತಿ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ. ಯುವಜನತೆ ಇಂತಹ ಮಹನೀಯರ ಜೀವನ ಮತ್ತು ಸಾಧನೆಗಳಿಂದ ಸ್ಫೂರ್ತಿ ಪಡೆದು ಸಾಹಿತ್ಯ ಸಾಮಾಜಿಕ ಕ್ಷೇತ್ರಗಳಲ್ಲಿ ಹಾಗೂ ತೊಡಗಿಸಿಕೊಳ್ಳಬೇಕು ಎಂದರು.

ಈ ಸಂಧರ್ಭದಲ್ಲಿ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶ್ರೀನಾಥ್, ಜಿವೇಂದರ್ ಕುಮಾರ್, ನಿಡಸಾಲೆ ಪ್ರಸಾದ್, ವರದರಾಜು, ರಾಮಣ್ಣ, ಜಯರಾಮಯ್ಯ, ಜ್ವಾಲೇಂದ್ರ ಮತ್ತು ವಿದ್ಯಾರ್ಥಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.